ಸಂಪುಟ : 10 ಸಂಚಿಕೆ: 153 ಪುಟ : 4+2 ಬೆಲೆ: 3.00 ಮಂಗಳವಾರ ಜುಲೈ 22 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 153 Pages : 4+2 Price : 3.00 Tuesday July 22 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಹುತಾತ್ಮ ರೈತರ ಸ್ಮಾರಕ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಸಚಿವ ಎಚ್.ಕೆ. ಪಾಟೀಲ

# ಕಳಸಾ-ಬಂಡೂರಿ ಯೋಜನೆಗೆ ಕೇಂದ್ರದಿಂದ ಅನ್ಯಾಯ



11 ವರ್ಷಗಳ ಹಿಂದೆ ಅಪರಕೃಷ್ಣಾ ಪ್ರಾಜೆಕ್ಟ್‌ನ ಕುರಿತು ಬ್ರಿಜೇಶಕುಮಾರ ಅವರು ಎಡಬ್ಲೂಡಿಪಿ ನ್ಯಾಯಾಧಿಕರಣದಿಂದ ಮಧ್ಯಂತರ ತೀರ್ಪು ಸಲ್ಲಿಕೆಯಾಗಿದೆ. 10ರಿಂದ 15 ಸಾವಿರ ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಈ ಯೋಜನೆಯಲ್ಲಿ ತೊಡಗಿಸಿದೆ. ಆದರೆ, ಈವರೆಗೂ ಕೇಂದ್ರ ಸರ್ಕಾರ ರಾಜ್ಯ ಪತ್ರದಲ್ಲಿ ಹೊರಡಿಸದಿರುವುದು ಅಸಮಾಧಾನಕರ ಸಂಗತಿ. ನಮ್ಮ ರಾಜ್ಯಕ್ಕೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ನಮ್ಮ ರಾಜ್ಯದ ಎಲ್ಲ ಯೋಜನೆಗಳಿಗೂ ಅನುಮತಿ ನೀಡಬೇಕೆಂದು ಸಚಿವ ಎಚ್.ಕೆ. ಪಾಟೀಲ ಒತ್ತಾಯಿಸಿದರು.



**■ ವಿಜಯಸಾಕ್ಷಿ ಸುದ್ದಿ, ನರಗುಂದ**

1980ರಲ್ಲಿ ನಡೆದ ಹೋರಾಟ ಕೇವಲ ಬೆಟರ್‌ಮೆಂಟ್ ಲೆವ್ವಿ ವಿರುದ್ಧದ ಹೋರಾಟವಲ್ಲ. ಅದು ನರಗುಂದ ಭಾಗದ ರೈತರ ಮೇಲೆ ನಡೆದ ಅನ್ಯಾಯ, ಅಗೌರವ, ನ್ಯಾಯಯುತ ಸರ್ಕಾರದ ಸೌಲಭ್ಯಗಳು ಸರಿಯಾದ ಸಮಯಕ್ಕೆ ಸಿಗದಿದ್ದರಿಂದ ರೈತರ ತಾಳ್ಮೆಯ ಕಟ್ಟೆಯೊಡೆದು ನರಗುಂದ ಬಂಡಾಯಕ್ಕೆ ಕಾರಣವಾಗಿದೆ. ಈ ಹೋರಾಟವನ್ನು ಸ್ಮರಿಸಿ ಮೆಲುಕು ಹಾಕುವುದರೊಂದಿಗೆ ಹುತಾತ್ಮ ರೈತರ ಸ್ಮರಣಾರ್ಥ 45 ವರ್ಷಗಳ ಬಳಿಕ ಸ್ಮಾರಕ ನಿರ್ಮಾಣಕ್ಕೆ ಅವಕಾಶ ದೊರೆತಿರುವುದು ನನಗೆ ವೈಯಕ್ತಿಕವಾಗಿ ವಿಶೇಷ ಸಮಾಧಾನ, ಸಂತೃಪ್ತಿಯನ್ನು ತಂದಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಸುದೀರ್ಘ 45 ವರ್ಷಗಳ ನಿರಂತರ ಹೋರಾಟದ ಫಲವಾಗಿ ಹುತಾತ್ಮ ರೈತರ ಸ್ಮಾರಕ ನಿರ್ಮಾಣಕ್ಕೆ ಶಾಸಕರಾದ ಸಿ.ಸಿ. ಪಾಟೀಲ, ಎನ್.ಎಚ್. ಕೋನರೆಡ್ಡಿ, ಆಳಂದ ಶಾಸಕ ಬಿ.ಆರ್. ಪಾಟೀಲ, ಮಾಜಿ ಸಚಿವ ಬಿ.ಆರ್. ಯಾವಗಲ್ ಅವರೊಡಗೂಡಿ ಸೋಮವಾರ ಭೂಮಿಪೂಜೆ ನೆರವೇರಿಸಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿದರು.

ರೈತರ ಬಹುದಿನಗಳ ಬೇಡಿಕೆಗೆ ಸ್ಪಂದಿಸಿ ಸ್ಮಾರಕ ನಿರ್ಮಾಣಕ್ಕೆ ಪೂಜೆ ನೆರವೇರಿಸಿ ನೀಲನಕ್ಷೆ ಬಿಡುಗಡೆಗೊಳಿಸಿದ್ದೇನೆ. ಮುಂದಿನ ವರ್ಷ ಜು.21ರ ಒಳಗಾಗಿ ಅತ್ಯಂತ ಸುಂದರವಾದ ಉದ್ಯಾನ, ಹುತಾತ್ಮ ರೈತರ ಸ್ಮಾರಕ ಭವನ ನಿರ್ಮಿಸಿ ಉದ್ಘಾಟನೆಗೊಳಿಸಲಾಗುವುದು. ಉತ್ತರ ಕರ್ನಾಟಕದ ಕಳಸಾ-ಬಂಡೂರಿ ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡದೆ ಅನ್ಯಾಯವೆಸಗುತ್ತಿದೆ. ಪರಿಣಾಮ ನಮ್ಮ ರಾಜ್ಯಕ್ಕೆ ನ್ಯಾಯಾಧಿಕರಣದಿಂದ ನೀರು ಹಂಚಿಕೆಯಾಗಿದ್ದರೂ ನಮಗೆ ಬಳಕೆಗೆ ಸಿಗುತ್ತಿಲ್ಲ. ವನ್ಯಜೀವಿ, ಪರಿಸರ ಇಲಾಖೆಯಿಂದ ಕಳಸಾ-ಬಂಡೂರಿ ಯೋಜನೆಗೆ ಕೇಂದ್ರ ಸರ್ಕಾರ ತಕ್ಷಣವೇ ಅನುಮತಿ ನೀಡಿದರೆ ರಾಜ್ಯ ಸಚಿವ ಸಂಪುಟದಲ್ಲಿ ಚರ್ಚಿಸಿ ತಕ್ಷಣವೇ ಕಾಮಗಾರಿ ಪ್ರಾರಂಭಿಸುತ್ತೇವೆ ಎಂದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, 1980ರ ದಶಕದಲ್ಲಿ ಪೊಲೀಸರ ಗೋಲಿಬಾರ್‌ಗೆ ಚಿಕ್ಕನರಗುಂದದ ವೀರಪ್ಪ ಕಡ್ಲಿಕೊಪ್ಪ, ಅಳಗವಾಡಿಯ ಬಸಪ್ಪ ಲಕ್ಕುಂಡಿ ಹುತಾತ್ಮರಾದರು. ಅಂದಿನ ರೈತರು ಕೆಚ್ಚೆದೆಯ ಹೋರಾಟದಿಂದ ತಮ್ಮ ರಕ್ತ ಹರಿಸಿದ್ದರ ಪರಿಣಾಮ ಇಂದು ನಾವೆಲ್ಲರೂ ಅಲ್ಪ ಪ್ರಮಾಣದ ನೀರನ್ನ ಕುಡಿಯಲು, ಕೃಷಿಗೆ ಬಳಕೆ ಮಾಡಿಕೊಳ್ಳುವಂತಾಗಿದೆ. ರೈತರ ಬಹುದಿನಗಳ ಹೋರಾಟದ ಮನವಿ ಸ್ಪಂದಿಸಿ ಸಚಿವ ಎಚ್.ಕೆ. ಪಾಟೀಲ ಹುತಾತ್ಮ ರೈತರ ಸ್ಮಾರಕ ನಿರ್ಮಾಣಕ್ಕೆ ವಿಶೇಷ ಮುತುವರ್ಜಿ ವಹಿಸಿ ಭೂಮಿಪೂಜೆ ನೆರವೇರಿಸಿದ್ದು ಶ್ಲಾಘನೀಯ ಎಂದರು.

ನವಲಗುಂದ ಶಾಸಕ ಎನ್.ಎಚ್. ಕೊನರೆಡ್ಡಿ, ಆಳಂದ ಶಾಸಕ ಬಿ.ಆರ್. ಪಾಟೀಲ, ಮಾಜಿ ಸಚಿವ ಬಿ.ಆರ್. ಯಾವಗಲ್, ರೈತಸಂಘ ಹಾಗೂ ಹಸಿರು ▶▶ 3ನೇ ಪುಟಕ್ಕೆ

## ಸಚಿವ ದಿನೇಶ್ ಗುಂಡೂರಾವ್ ಇಂದು ಗದಗ ಜಿಲ್ಲೆಗೆ

**■ ವಿಜಯಸಾಕ್ಷಿ ಸುದ್ದಿ, ಗದಗ**



ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಅವರು ಗದಗ ಜಿಲ್ಲೆಯಲ್ಲಿ ಜುಲೈ 22 ರಂದು ಜಿಲ್ಲಾ ಪ್ರವಾಸದ ಕೈಗೊಳ್ಳಲಿದ್ದಾರೆ.

ಜುಲೈ 22 ರಂದು ಮುಂಜಾನೆ 11 ಗಂಟೆಗೆ ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿಗೆ ಆಗಮಿಸಿ ಶಿರಹಟ್ಟಿಯ ತಾಲ್ಲೂಕು ಆಸ್ಪತ್ರೆಯ ಆವರಣದಲ್ಲಿ ತಾಲೂಕ ಆಸ್ಪತ್ರೆಯ ಶಿಲಾನ್ಯಾಸ, ಬಾಲೆಹೊಸೂರ ಪ್ರಾಥಮಿಕ ಆರೋಗ್ಯ ಕೇಂದ್ರ ಸಿಬ್ಬಂದಿ ವಸತಿ ನಿಲಯ ಉದ್ಘಾಟನೆ ಹಾಗೂ ಮುಂಡರಗಿ ಬಿ ಪಿ ಎಚ್ ಪ್ರಯೋಗಾಲಯ, ಗೃಹ ಆರೋಗ್ಯ ಯೋಜನೆಗೆ ಚಾಲನೆ ನೀಡುವರು.

ನಂತರ ಧಾರವಾಡಕ್ಕೆ ಪ್ರಯಾಣ ಬೆಳೆಸುವರೆಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಸಾರ್ವಜನಿಕರ ಗಮನಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪೊಲೀಸ್ ಘಟಕದಲ್ಲಿನ ಒಟ್ಟು 16 ನಿರುಪಯುಕ್ತ ಪೊಲೀಸ್ ವಾಹನಗಳನ್ನು (ನಾಲ್ಕು ಚಕ್ರ ಮತ್ತು ದ್ವಿಚಕ್ರ) ಹಾಗೂ 2024-25 ನೇ ಸಾಲಿನ 590 ಕೆ.ಜಿ ನಿರುಪಯುಕ್ತ ವಾಹನಗಳ ದುರಸ್ತಿ ಸಮಯದಲ್ಲಿ ತೆ-ಗೆದ ಬಿಡಿಭಾಗಗಳು, 250 ಲೀಟರ್ ಸುಟ್ಟ ಎಣ್ಣೆ ಮತ್ತು 94 ಟಾಯರ್ 07 ▶▶ 3ನೇ ಪುಟಕ್ಕೆ

### ಮಾನವ ಹಕ್ಕುಗಳ ರಕ್ಷಣೆ ಮತ್ತು ಬಲವರ್ಧನೆಗೆ ಗ್ಯಾರಂಟಿ ಯೋಜನೆಗಳು ಪೂರಕ । ಅಂತಾರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಸಚಿವ ಎಚ್.ಕೆ. ಪಾಟೀಲ

# ಮಾನವ ಹಕ್ಕುಗಳ ಪಾಲನೆಯಿಂದ ಸಾಮಾಜಿಕ ಕ್ರಾಂತಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳನ್ನು ಮಾನವ ಹಕ್ಕುಗಳಾಗಿಸಲು ಸರ್ಕಾರ ಚಿಂತನೆ ನಡೆಸಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯಲ್ಲಿ ಸೋಮವಾರ ಏರ್ಪಡಿಸಿದ್ದ 'ಕವಲು ದಾರಿಯಲ್ಲಿ ಮಾನವ ಹಕ್ಕುಗಳು:ಭಾರತ ಹಾಗೂ ಪಶ್ಚಿಮ' ವಿಷಯದ ಕುರಿತ ಅಂತಾರಾಷ್ಟ್ರೀಯ ವಿಚಾರ ಸಂಕಿರಣ ಉದ್ಘಾಟಿಸಿ ಅವರು ಮಾತನಾಡಿದರು.




ರಾಜ್ಯ ಸರ್ಕಾರ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳನ್ನು ಸಂವಿಧಾನಾತ್ಮಕವಾಗಿ ಮಾನವ ಹಕ್ಕುಗಳನ್ನಾಗಿ ಮಾಡಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಇದರಿಂದಾಗಿ ಪ್ರತಿಯೊಬ್ಬರೂ ಸಹ ಗೌರವಯುತ ಜೀವನ ನಡೆಸುವಂತಾಗಲಿ. ಬಡತನ ಎಲ್ಲಿವರೆಗೂ ಇರುತ್ತದೆಯೋ ಅಲ್ಲಿವರೆಗೂ ಮಾನವ ಹಕ್ಕುಗಳಿಗೆ ಬೆಲೆ ಇಲ್ಲದಂತಾಗುತ್ತದೆ. ಸರ್ಕಾರ ರಾಜ್ಯದಲ್ಲಿ ಪಂಚ ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ಬಡತನ ನಿರ್ಮೂಲನೆ ಮಾಡಿದೆ. ಮಾನವ ಹಕ್ಕುಗಳ ರಕ್ಷಣೆ ಮತ್ತು ಬಲವರ್ಧನೆಗೆ ಗ್ಯಾರಂಟಿಗಳು ಪೂರಕವಾಗಿವೆ ಎಂದು ತಿಳಿಸಿದರು.

1993ರಲ್ಲೇ ಮಾನವ ಹಕ್ಕುಗಳ ಆಯೋಗ ರಚನೆ ಮಾಡಲಾಗಿತ್ತು. ಆದರೆ, 2003ರವರೆಗೂ ನಿಯಮಾವಳಿಗಳೇ ರಚನೆ ಆಗದೆ ದೇಶದ ಯಾವುದೇ ರಾಜ್ಯದಲ್ಲಿ ಮಾನವ ಹಕ್ಕುಗಳು ಜಾರಿ ಆಗಲಿಲ್ಲ. 2003ರಲ್ಲಿ ರಾಜ್ಯ ಸರ್ಕಾರ ನಿಯಮಾವಳಿ ರಚನೆ ಮಾಡಿ ಜಾರಿ ಮಾಡಿದ ಮೊದಲ ರಾಜ್ಯವಾಯಿತು ಎಂದು ಹೇಳಿದರು.

ಕರ್ನಾಟಕ ರಾಜ್ಯದಲ್ಲಿ ಮಾನವ ಹಕ್ಕುಗಳ ನ್ಯಾಯಾಲಯವನ್ನು ಸ್ಥಾಪಿಸಿ, ಮಾನವ ಹಕ್ಕುಗಳ ರಕ್ಷಣೆಗೆ ಮುಂದಾಗಿದೆ. ▶▶ 3ನೇ ಪುಟಕ್ಕೆ

ಕಾನೂನು ನಿಯಮಗಳು, ಆಡಳಿತಾತ್ಮಕ ವಿಷಯ, ಸಂವಿಧಾನಾತ್ಮಕ ಪ್ರಜಾಪ್ರಭುತ್ವದಲ್ಲಿ ಮಾನವ ಹಕ್ಕುಗಳ ರಕ್ಷಣೆ ಜಾಗೃತಿಗಾಗಿ ಅಂತಾರಾಷ್ಟ್ರೀಯ ವಿಚಾರ ಸಂಕಿರಣಗಳಂತಹ ಕಾರ್ಯಕ್ರಮದ ಅಗತ್ಯವಿದೆ. ಸಮಾಜದಲ್ಲಿ ಜವಾಬ್ದಾರಿಯುತ ನಾಗರಿಕರಾಗಿ ನಾವು ನಡೆದುಕೊಳ್ಳುತ್ತಿದ್ದೇವಾ ಎಂದು ನಮ್ಮನ್ನು ನಾವು ಪ್ರಶ್ನಿಸಿಕೊಳ್ಳಬೇಕಿದೆ.

**– ಎಚ್.ಕೆ. ಪಾಟೀಲ.**
ಕಾನೂನು, ಮಾನವ ಹಕ್ಕುಗಳು,
ಪ್ರವಾಸೋದ್ಯಮ ಸಚಿವರು.

ಕಾನೂನು ಆಯೋಗದ ಅಧ್ಯಕ್ಷ ಡಾ. ಅಶೋಕ ಇಂಚಗೇರಿ ಮಾತನಾಡಿ, ನಿಜವಾದ ಮನುಷ್ಯರಾಗುವುದೇ ಮಾನವ ಹಕ್ಕಿನ ರಕ್ಷಣೆ ಆಗಿದೆ. ನೈತಿಕತೆಯನ್ನು ಬೆಂಬಲಿಸುವುದು, ಸ್ವತಂತ್ರವಾಗಿ ಬದುಕುವುದು ಮತ್ತು ಶಾಂತಿಯುತ ಸಮಾಜ ನಿರ್ಮಾಣಕ್ಕೆ ಮಾನವ ಹಕ್ಕುಗಳು ಎಂದು ಹೇಳಬಹುದು. ಎಲ್ಲ ಧರ್ಮಗ್ರಂಥಗಳಲ್ಲಿ ಮಾವನ ಹಕ್ಕುಗಳನ್ನು ಉಲ್ಲೇಖಿಸಲಾಗಿದೆ. ನಿಧನದ ನಂತರದ ಅಂತ್ಯಸಂಸ್ಕಾರವು ಕೂಡ ಇಚ್ಛೆಯಂತೆ ನಡೆಯಬೇಕು. ಅದು ಕೂಡ ಮಾನವ ಹಕ್ಕಾಗಿದೆ ಎಂದು ಹೇಳಿದರು.

### ಎಚ್‌ಪಿವಿ ಲಸಿಕಾ ಅಭಿಯಾನದ ಕುರಿತು ಮಾಹಿತಿ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಭಯಪಡದೇ ಎಚ್‌ಪಿವಿ ಲಸಿಕೆ ಪಡೆಯಿರಿ



**■ ವಿಜಯಸಾಕ್ಷಿ ಸುದ್ದಿ, ರೋಣ**

ಹೆಣ್ಣುಮಕ್ಕಳ ಗರ್ಭಕಂಠದ ಕ್ಯಾನ್ಸರ್‌ನಿಂದ ಭವಿಷ್ಯದ ಜೀವನವನ್ನು ರಕ್ಷಿಸಲು ಎಚ್‌ಪಿವಿ ಲಸಿಕೆ ಉತ್ತಮವಾಗಿದೆ. ಈ ನಿಟ್ಟಿನಲ್ಲಿ ಹೆಣ್ಣುಮಕ್ಕಳ ಪಾಲಕರು ಭಯ ಪಡದೆ ಲಸಿಕಾ ಅಭಿಯಾನ ಯೋಜನೆಯನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಕರೆ ನೀಡಿದರು.

ಅವರು ಸೋಮವಾರ ಪಟ್ಟಣದ ಗುರುಭವನದಲ್ಲಿ ಆರೋಗ್ಯ, ಶಿಕ್ಷಣ ಇಲಾಖೆಯ ಅಧಿಕಾರಿಗಳ ಸಭೆಯನ್ನುದ್ದೇಶಿಸಿ ಮಾತನಾಡುತ್ತಿದ್ದರು.

ರೋಣ, ಗಜೇಂದ್ರಗಡ ತಾಲೂಕು ಸೇರಿದಂತೆ ಮತಕ್ಷೇತ್ರದಲ್ಲಿನ ಎಲ್ಲ ಸರಕಾರಿ, ಅನುದಾನಿತ, ಅನುದಾನ ರಹಿತ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿಕೊಂಡು ಅಲ್ಲಿನ ವಿದ್ಯಾರ್ಥಿನಿಯರಿಗೆ ಎಚ್‌ಪಿವಿ ಲಸಿಕೆಯನ್ನು ನೀಡಲಾಗುವುದು. ಅಲ್ಲದೆ ಹೆಣ್ಣುಮಕ್ಕಳು, ವಿದ್ಯಾರ್ಥಿನಿಯರು ಈ ಲಸಿಕೆ ಪಡೆಯಲು ಹಿಂದೇಟು ಹಾಕಬಾರದು. 9 ವರ್ಷದಿಂದ 14 ವರ್ಷದವರು ಮತ್ತು 15 ವರ್ಷಕ್ಕಿಂತ ಮೇಲ್ಪಟ್ಟವರು ಸಹ ಲಸಿಕೆಯನ್ನು ಪಡೆಯಬೇಕು ಎಂದರು.

ಮೊದಲು ▶▶ 3ನೇ ಪುಟಕ್ಕೆ

ನಾನು ನನ್ನ ಕುಟುಂಬದ ಹೆಣ್ಣುಮಕ್ಕಳಿಗೆ ಎಚ್‌ಪಿವಿ ಲಸಿಕೆಯನ್ನು ಈಗಾಗಲೇ ಕೊಡಿಸಿದ್ದೇನೆ. ಪಾಲಕರು ಹೆಣ್ಣುಮಕ್ಕಳ ಆರೋಗ್ಯದ ದೃಷ್ಟಿಯಿಂದ ಈ ಲಸಿಕಾ ಅಭಿಯಾನವನ್ನು ಪ್ರೋತ್ಸಾಹಿಸಬೇಕು.

**– ಜಿ.ಎಸ್. ಪಾಟೀಲ.**
ಶಾಸಕರು-ರೋಣ.

### ಮೂರು ದಿನಗಳ ವೈದ್ಯಕೀಯ ವಿಜ್ಞಾನ ವಸ್ತು ಪ್ರದರ್ಶನಕ್ಕೆ ಸಚಿವ ಎಚ್.ಕೆ. ಪಾಟೀಲ ಚಾಲನೆ

# ಆರೋಗ್ಯದ ಕಾಳಜಿ ಮೂಡಿಸಿದ 'ಮೆಡಿವಿಜನ್'

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿ ದಶಮಾನೋತ್ಸವದ ಸಂಭ್ರಮಾಚರಣೆ ಅಂಗವಾಗಿ 'ಮೆಡಿವಿಜನ್ 2025 ವೈದ್ಯಕೀಯ ವಿಜ್ಞಾನ ವಸ್ತುಪ್ರದರ್ಶನ'ಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೋಮವಾರ ಚಾಲನೆ ನೀಡಿದರು.

'ಮೆಡಿವಿಜನ್' ವಿದ್ಯಾರ್ಥಿಗಳಿಗೆ ಭರಪೂರ ಮಾಹಿತಿ ಒದಗಿಸುವಲ್ಲಿ ಯಶಸ್ವಿಯಾಯಿತು. ಮೂರು ದಿನ ನಡೆಯುವ ವಸ್ತುಪ್ರದರ್ಶನದಲ್ಲಿ ಸೋಮವಾರ 8200 ಮಕ್ಕಳು ಭಾಗವಹಿಸಿದ್ದರು. ಜಿಲ್ಲೆಯ ವಿವಿಧ ಭಾಗಗಳಿಂದ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ ವಿದ್ಯಾರ್ಥಿಗಳನ್ನು ಶಿಕ್ಷಕರು ಕರೆತಂದಿದ್ದರು. ಕಣ್ಣು, ಮೂಗು, ಬಾಯಿ, ಕಿವಿ ಸೇರಿದಂತೆ ಇಡೀ ದೇಹದ ಸಂಕೀರ್ಣ ರಚನೆಗಳನ್ನು ಯುವ ವೈದ್ಯರು ವಿದ್ಯಾರ್ಥಿಗಳಿಗೆ ಸರಳವಾಗಿ ತಿಳಿಸಿಕೊಟ್ಟರು.



ವೈದ್ಯರ ವಿವರಣೆಯನ್ನು ಮಕ್ಕಳು ಆಸಕ್ತಿಯಿಂದ ಕೇಳಿ ತಿಳಿದುಕೊಂಡರು. 'ಸರ್ವಜನೋ ಅರೋಗ್ಯಂ ಭವತು' ಎಂಬುದು ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಘೋಷ ವಾಕ್ಯವಾಗಿದ್ದು, ಸರ್ವರೂ ಆರೋಗ್ಯದ ಬಗ್ಗೆ ಕಾಳಜಿ ಹೊಂದಲು ತಿಳುವಳಿಕೆ ಮೂಡಿಸುವಲ್ಲಿ ಪ್ರದರ್ಶನ ಯಶಸ್ವಿಯಾಯಿತು. ಜನರಲ್ ಮೆಡಿಸನ್, ಮನೋವೈದ್ಯಕೀಯ, ಸರ್ಜರಿ, ಇಎನ್‌ಟಿ, ರಕ್ತ, ಕರಳು, ಕಿಡ್ನಿ, ಮೂಳೆ, ಅನಾಟಮಿ, ಪ್ರಸೂತಿ ಮತ್ತು ಹೆರಿಗೆ ಸೇರಿದಂತೆ ವೈದ್ಯಕೀಯ ವಿಜ್ಞಾನದಲ್ಲಿರುವ ಶಾಖೆಗಳ ವಿವರಣೆ ನೀಡಲು ಪ್ರತ್ಯೇಕ ಸ್ಟಾಲ್‌ಗಳನ್ನು ನಿರ್ಮಿಸಿ, ಅದಕ್ಕೆ ಸಂಬಂಧಿಸಿದ ಮಾದರಿಗಳನ್ನು ಇರಿಸಲಾಗಿತ್ತು. ವಿದ್ಯಾರ್ಥಿಗಳಿಗೆ ಜ್ಞಾನ ಹಂಚುವುದರೊಂದಿಗೆ ವೈದ್ಯಕೀಯ ಅಭ್ಯಾಸ ಮಾಡುತ್ತಿರುವ ಯುವ ವೈದ್ಯರ ಕಲಿಕೆಗೂ ಪೂರಕವಾಗಿತ್ತು.

ಮಾದರಿ ತೋರಿಸಿ ವಿವರಣೆ ನೀಡಿದ್ದರಿಂದ ಮಕ್ಕಳ ಆಸಕ್ತಿಯೂ ಹಿಗ್ಗಿತ್ತು. ಮೆಡಿವಿಜನ್‌ನಲ್ಲಿ ಮಾನವ ಶರೀರ ರಚನೆ, ನೈಜ ಅಂಗಾಗಗಳ ಪ್ರದರ್ಶನ, ಶರೀರ ಕ್ರಿಯೆ-ತಿಳುವಳಿಕೆ, ಆರೋಗ್ಯದ ಬಗ್ಗೆ ಮಾಹಿತಿ, ಕ್ಯಾನ್ಸರ್, ಸಕ್ಕರೆ ಕಾಯಿಲೆ, ರಕ್ತದೊತ್ತಡ, ಹೃದಯ ಕಾಯಿಲೆ, ಥೈರಾಯ್ಡ್ ಇನ್ನಿತರೆ ಕಾಯಿಲೆಗಳ ಬಗ್ಗೆ ತಿಳುವಳಿಕೆ, ಆಧುನಿಕ ವೈದ್ಯಕೀಯ ಉಪಕರಣಗಳ ಪ್ರದರ್ಶನ, ಆಹಾರ ಬಗ್ಗೆ ಅರಿವು ಮೂಡಿಸುವ ವೈಶಿಷ್ಟ್ಯಗಳು ಕಂಡುಬಂದವು. ಭವಿಷ್ಯದಲ್ಲಿ ವೈದ್ಯರಾಗುವ ಕನಸುಗಳಿಗೆ ಪ್ರೇರಣೆ ನೀಡುವುದು ಈ ಕಾರ್ಯಕ್ರಮದ ಉದ್ದೇಶವಾಗಿತ್ತು.

ವಸ್ತು ಪ್ರದರ್ಶನ ಕಾರ್ಯಕ್ರಮದಲ್ಲಿ ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ್ ಮಂದಾಲಿ, ಸಿದ್ದು ಪಾಟೀಲ, ವಾಸಣ್ಣ ಕುರಡಗಿ, ಎಸ್.ಎನ್. ಬಳ್ಳಾರಿ, ಜಿಮ್ಸ್ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಕರಿಗೌಡರ, ಡಿಡಿಪಿಐ ಆರ್.ಎಸ್. ಬುರಡಿ ಹಾಗೂ ಸಂಸ್ಥೆಯ ಬೋಧಕ-ಬೋಧಕೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸಂಪಾದಕೀಯ

# ಮುಂಗಾರು ಅಧಿವೇಶನ: ಸವಾಲುಗಳ ಸುಳಿಯಲ್ಲಿ ಕೇಂದ್ರ ಸರ್ಕಾರ

ಪ್ರಸ್ತುತ ನಡೆಯುತ್ತಿರುವ ಮುಂಗಾರು ಸಂಸತ್ ಅಧಿವೇಶನವು ಸವಾಲುಗಳ ಸುಳಿಯಲ್ಲಿ ಸಿಲುಕಿರುವ ಸರ್ಕಾರಕ್ಕೆ ಮತ್ತು ವಿರೋಧ ಪಕ್ಷಗಳಿಗೆ ಅಗ್ನಿಪರೀಕ್ಷೆಯಾಗಿದೆ. ದೇಶ ಎದುರಿಸುತ್ತಿರುವ ಹಲವು ಜ್ವಲಂತ ಸಮಸ್ಯೆಗಳು ಈ ಅಧಿವೇಶನದ ಕೇಂದ್ರ ಬಿಂದುವಾಗಲಿವೆ.

ವಿರೋಧ ಪಕ್ಷಗಳು ಸರ್ಕಾರದ ಕಾರ್ಯವೈಖರಿಯನ್ನು ತರಾಟೆಗೆ ತೆಗೆದುಕೊಳ್ಳಲು ಸಜ್ಜಾಗಿ ನಿಂತಿವೆ.

ನಿರ್ದಿಷ್ಟವಾಗಿ, ಪಹಲ್ಗಾಂ ದಾಳಿ, ಆಪರೇಷನ್ ಸಿಂಧೂರ, ಏರ್ ಇಂಡಿಯಾ ವಿಮಾನ ದುರಂತ, ಮತ್ತು ಬಿಹಾರ ಮತದಾರರ ಪಟ್ಟಿಗೆ ಸಂಬಂಧಿಸಿದ ವಿವಾದಗಳು ಚರ್ಚೆಯ ಮುಂಚೂಣಿಗೆ ಬರುವ ಸಾಧ್ಯತೆಯಿದೆ.

ಪಹಲ್ಗಾಂ ದಾಳಿಯು ದೇಶದ ಆಂತರಿಕ ಭದ್ರತೆಯ ದುರ್ಬಲತೆಯನ್ನು ಎತ್ತಿ ಹಿಡಿದಿದ್ದು, ಸರ್ಕಾರ ಈ ಕುರಿತು ಸಮಗ್ರ ಉತ್ತರ ನೀಡಬೇಕಿದೆ. ಆಪರೇಷನ್ ಸಿಂಧೂರದಂತಹ ಕಾರ್ಯಾಚರಣೆಗಳ ಕಾನೂನು ಬದ್ಧತೆ ಮತ್ತು ಪಾರದರ್ಶಕತೆಯ ಬಗ್ಗೆ ವಿರೋಧ ಪಕ್ಷಗಳು ಪ್ರಶ್ನಿಸಲಿವೆ. ಏರ್ ಇಂಡಿಯಾ ವಿಮಾನ ದುರಂತವು ವಾಯುಯಾನ ಸುರಕ್ಷತೆಯ ಬಗ್ಗೆ ಗಂಭೀರ ಕಳವಳಗಳನ್ನು ಹುಟ್ಟುಹಾಕಿದ್ದು, ದುರಂತಕ್ಕೆ ಕಾರಣರಾದವರ ಹೊಣೆಗಾರಿಕೆ ಮತ್ತು ಭವಿಷ್ಯದಲ್ಲಿ ಇಂತಹ ಘಟನೆಗಳನ್ನು ತಡೆಯುವ ಕುರಿತು ಸ್ಪಷ್ಟ ಕ್ರಮಗಳನ್ನು ಸರ್ಕಾರದಿಂದ ನಿರೀಕ್ಷಿಸಲಾಗಿದೆ.

ಇನ್ನು ಬಿಹಾರ ಮತದಾರರ ಪಟ್ಟಿಯ ವಿವಾದವು ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಮತ್ತು ನಿಷ್ಪಕ್ಷಪಾತದ ಬಗ್ಗೆ ಆತಂಕಗಳನ್ನು ಸೃಷ್ಟಿಸಿದೆ.

ಈ ಎಲ್ಲಾ ವಿಷಯಗಳ ಜೊತೆಗೆ, ದೇಶದ ಆರ್ಥಿಕ ಸ್ಥಿತಿ, ಬೆಲೆ ಏರಿಕೆ, ನಿರುದ್ಯೋಗ, ಮತ್ತು ರೈತರ ಸಮಸ್ಯೆಗಳು ಸಹ ಅಧಿವೇಶನದಲ್ಲಿ ಪ್ರಮುಖವಾಗಿ ಚರ್ಚೆಯಾಗುವ ಸಾಧ್ಯತೆಯಿದೆ.

ಜನಸಾಮಾನ್ಯರ ಬದುಕು ದುಸ್ತರವಾಗಿರುವಾಗ, ಸರ್ಕಾರ ಈ ಸಮಸ್ಯೆಗಳಿಗೆ ಯಾವ ಪರಿಹಾರಗಳನ್ನು ನೀಡುತ್ತದೆ ಎಂಬುದನ್ನು ಇಡೀ ದೇಶ ಕಾತುರದಿಂದ ನಿರೀಕ್ಷಿಸುತ್ತಿದೆ.

ಈ ಅಧಿವೇಶನವು ಕೇವಲ ರಾಜಕೀಯ ಕೆಸರೆರೆಚಾಟಕ್ಕೆ ಸೀಮಿತವಾಗದೆ, ದೇಶದ ಪ್ರಮುಖ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ವೇದಿಕೆಯಾಗಬೇಕು. ಸಂಸತ್ತಿನಲ್ಲಿ ನಡೆಯುವ ಪ್ರತಿಯೊಂದು ಚರ್ಚೆಯೂ ಜನಪರವಾಗಿದ್ದು, ದೇಶದ ಪ್ರಗತಿಗೆ ಪೂರಕವಾಗಿದೆಯೇ ಎಂಬುದನ್ನು ಕಾಲವೇ ನಿರ್ಧರಿಸಲಿದೆ.

### ವೀರಶೈವ ಪೀಠಾಚಾರ್ಯರ, ಶಿವಾಚಾರ್ಯರ ಶೃಂಗ ಸಮ್ಮೇಳನದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಪಂಚ ಪೀಠಗಳು ಒಗ್ಗಟ್ಟಾಗಿ ಹೆಜ್ಜೆ ಹಾಕಲಿ

■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ಹಿಂದೆ ಏನೇ ನಡೆದಿರಲಿ. ಶ್ರೀ ಜಗದ್ಗುರು ಪಂಚಾಚಾರ್ಯರು ಒಗ್ಗೂಡಿ ಹೆಜ್ಜೆ ಹಾಕಿದಲ್ಲಿ ಸದೃಢ ಸಮಾಜ ಕಟ್ಟಿ ಬೆಳೆಸಲು ಸಾಧ್ಯವಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ನಗರದ ಶ್ರೀ ಜಗದ್ಗುರು ರಂಭಾಪುರಿ ವೀರಗಂಗಾಧರ ಮಂಗಲ ಭವನದಲ್ಲಿ ಜರುಗಿದ ವೀರಶೈವ ಪೀಠಾಚಾರ್ಯರ ಹಾಗೂ ಶಿವಾಚಾರ್ಯರ ಶೃಂಗ ಸಮ್ಮೇಳನದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಕಳೆದ 16 ವರ್ಷಗಳಿಂದ ಭಕ್ತರು ನಿರೀಕ್ಷಿಸುತ್ತಿದ್ದ ಶುಭ ಘಳಿಗೆ ಇಂದು ಕೂಡಿ ಬಂದಿದೆ. ಮುಂದಿನ ದಿನಗಳಲ್ಲಿ ಶಿವಾಚಾರ್ಯ ಸಮೂಹ ಭಕ್ತರು ನಾವೆಲ್ಲ ಒಂದೇ ಎಂಬ ಭಾವನೆಯಿಂದ ಮುನ್ನಡೆದಿದ್ದಾದರೆ ಸಮಾಜದ ಹಿತದೃಷ್ಟಿಯಿಂದ ಗಟ್ಟಿ ಹೆಜ್ಜೆ ಇಡಲು ಸಾಧ್ಯವಾಗುತ್ತದೆ. ಶಾಮನೂರು ಶಿವಶಂಕರಪ್ಪನವರ ಒತ್ತಾಸೆಯಿಂದ ಇಂದು ಇದೆಲ್ಲ ಸಾಧ್ಯವಾಗಿದೆ. ಇಂದು ಜಾತಿ-ಜಾತಿಗಳ ಹೆಸರಿನಲ್ಲಿ ಸಮಾಜ ಛಿದ್ರವಾಗುತ್ತಿರುವುದನ್ನು ನೋಡಿ ಮನಸ್ಸಿಗೆ ಬಹಳ ವೇದನೆಯಾಗುತ್ತಿದೆ. ಪೂರ್ವದ ಆಚಾರ್ಯರು ಜಾತಿ ಮತ ಪಂಥಗಳನ್ನು ಮೀರಿ ಭಾವೈಕ್ಯತೆಯನ್ನು ಮೂಡಿಸುವ ದೃಷ್ಟಿಯಿಂದ ದೇಶದಾದ್ಯಂತ ಪಂಚ ಪೀಠಗಳನ್ನು ಸ್ಥಾಪಿಸಿದ್ದಾರೆ. ಅಸ್ಪೃಶ್ಯರ ಉದ್ಧಾರ, ಮಹಿಳೆಯರಿಗೆ ಸಮಾನ ಸ್ಥಾನ ಕಲ್ಪಿಸುವ ಕಾರ್ಯವನ್ನು ಸಹಸ್ರಾರು ವರುಷಗಳ ಹಿಂದೆಯೇ ಮಾಡಿದ್ದಾರೆ. ಸಮಾಜದ ಒಳಪಂಗಡಗಳು ಮೂಲ ಸೆಲೆಯಲ್ಲಿ ಬರುವ ಅವಶ್ಯಕತೆಯಿದೆ ಎಂದರು.




ಸಮಾರಂಭವನ್ನು ಉದ್ಘಾಟಿಸಿದ ಅ.ಭಾ.ವೀ. ಮಹಾಸಭೆಯ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕರಪ್ಪನವರು ಮಾತನಾಡಿ, ಪಂಚ ಪೀಠಾಧೀಶರನ್ನು ಒಗ್ಗೂಡಿಸುವ ಆಶಯ ಇಂದು ಸಾಧ್ಯವಾಗಿದ್ದು ಸಂತಸ ತಂದಿದೆ ಎಂದರು. ಮಹಾಸಭಾದ ರಾಜ್ಯಾಧ್ಯಕ್ಷ ಶಂಕರ ಬಿದರಿ ಮಾತನಾಡಿ, ವೀರಶೈವ ಮಹಾಸಭೆಯ ಇತಿಹಾಸದಲ್ಲಿ ಇಂದು ಸುವರ್ಣ ಘಳಿಗೆ. ಇದು ಮೊದಲನೆಯ ಹೆಜ್ಜೆ ಆಗಿದ್ದು ಮುಂದಿನ ದಿನಗಳಲ್ಲಿ ಗುರು ವಿರಕ್ತರು ಮತ್ತು ಶರಣ ಸಂಪ್ರದಾಯವನ್ನು ಒಗ್ಗೂಡಿಸಿ ಭವ್ಯ ಕಾರ್ಯಕ್ರಮ ಮಾಡುವ ಉದ್ದೇಶವಿದೆ. 1975ರ ಪೂರ್ವದಲ್ಲಿ ಆರ್ಥಿಕ ಮೀಸಲಾತಿ ಇದ್ದುದು ನಂತರ ಜಾತಿ ಆಧಾರಿತ ಮೀಸಲಾತಿ ಪ್ರಾರಂಭದ ನಂತರ ಈ ಸಮಸ್ಯೆಗಳು ಉದ್ಭವಿಸಿವೆ ಎಂದರು. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಪ್ರಾಸ್ತಾವಿಕವಾಗಿ ಮಾತನಾಡಿ, ವೀರಶೈವ ಲಿಂಗಾಯತ ಸಮಗ್ರ ಅಭಿವೃದ್ಧಿ ನಮ್ಮ ಗುರಿಯಾಗಲಿ ಎಂದರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯ ಮಂತ್ರಿ ಡಾ. ಬಿ.ಎಸ್. ಯಡಿಯೂರಪ್ಪ, ಅರಣ್ಯ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ, ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ, ರಾಜ್ಯ ಬಿ.ಜೆ.ಪಿ ಅಧ್ಯಕ್ಷ, ಶಾಸಕ ಬಿ.ವೈ. ವಿಜಯೇಂದ್ರ, ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ ಭಾಗವಹಿಸಿ ಮಾತನಾಡಿದರು.

ಸಾನ್ನಿಧ್ಯ ವಹಿಸಿದ ಶ್ರೀ ಹಿಮವತ್ಕೇದಾರ ಭೀಮಾಶಂಕರಲಿಂಗ ಜಗದ್ಗುರುಗಳು ಮಾತನಾಡಿ, ಜಾತಿ ಜನಗಣತಿ ಸಂದರ್ಭದಲ್ಲಿ ನೀಡುವ ನಮೂನೆಗಳ ಪರಿಷ್ಕರಣೆ ಆಗಬೇಕು. ಧರ್ಮ ಜಾತಿ ಉಪಜಾತಿಗಳನ್ನು ಪ್ರತ್ಯೇಕ ಕಾಲಂನಲ್ಲಿ ತೋರಿಸುವಂತೆ ಜಾತಿ ಗಣತಿ ನಮೂನೆಯಲ್ಲಿ ಪರಿಷ್ಕರಣೆ ಕೇಂದ್ರ ಸರ್ಕಾರದಿಂದ ಆಗಬೇಕು. ಇದನ್ನು ಮನದಟ್ಟು ಮಾಡುವ ಕೆಲಸ ಎಲ್ಲ ಪಕ್ಷಗಳ ಸಂಸದರು ಮಾಡುವ ಅವಶ್ಯಕತೆಯಿದೆ ಎಂದರು. ಸಾನ್ನಿಧ್ಯ ವಹಿಸಿದ ಶ್ರೀಮತ್ಕಾಶಿ ಡಾ. ಚಂದ್ರಶೇಖರ ಜಗದ್ಗುರುಗಳು ಮಾತನಾಡಿ, ವೀರಶೈವರನ್ನು ಅವರ ವೇಷ-ಭೂಷಣಗಳಿಂದ ಗುರುತಿಸದೇ ಅವರ ಆಚಾರ ವಿಚಾರಗಳಿಂದ ಗುರುತಿಸುವಂತಾಗಬೇಕು. ಅ.ಭಾ ವೀರಶೈವ ಮಹಾಸಭೆ ತನ್ನ ಕಾರ್ಯ ಕ್ಷೇತ್ರವನ್ನು ದೇಶದ ಉತ್ತರ ಭಾಗಕ್ಕೂ ಪಸರಿಸಬೇಕು ಎಂದರು.

ಸಾನ್ನಿಧ್ಯ ವಹಿಸಿದ ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಮಾತನಾಡಿ, ಹಲವಾರು ಕಾರಣಗಳಿಂದ ಸಮಾಜ ಕವಲು ದಾರಿಯಲ್ಲಿ ಹೋಗುತ್ತಿದೆ. ಅದನ್ನು ಸರಿಪಡಿಸುವ ಜವಾಬ್ದಾರಿ ಎಲ್ಲರ ಮೇಲಿದೆ. ವೀರಶೈವ ಲಿಂಗಾಯತ ಸಮಾಜದ ವಿಚಾರ ಬಂದಾಗ ಎಲ್ಲ ಪಕ್ಷ ಭೇದಗಳನ್ನು, ಜಾತಿ ಭೇದಗಳನ್ನು ಮರೆತು ಮುನ್ನಡೆಯಬೇಕೆಂದರು. ಹಂಪಿ ಸಾವಿರದೇವರಮಠದ ವಾಮದೇವ ಮಹಾಂತ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ವಿಶೇಷ ಆಹ್ವಾನಿತರಾಗಿ ಅ.ಭಾ.ವೀ ಮಹಾಸಭೆ ಉಪಾಧ್ಯಕ್ಷರಾದ ಅಥಣಿ ವೀರಣ್ಣ, ಮಾಜಿ ಸಚಿವರಾದ ಎಂ.ಪಿ. ರೇಣುಕಾಚಾರ್ಯ, ವಿಧಾನ ಪರಿಷತ್ ಮಾಜಿ ಸದಸ್ಯರಾದ ಡಾ. ಎ.ಎಚ್. ಶಿವಯೋಗಿಸ್ವಾಮಿ, ಜಿ.ಪಂ ಮಾಜಿ ಸದಸ್ಯರಾದ ಬಿ.ಎಂ. ವಾಗೀಶಸ್ವಾಮಿ ಭಾಗವಹಿಸಿದ್ದರು. ಬೆಂಗಳೂರಿನ ಶಿವಶಂಕರ ಶಾಸ್ತ್ರಿ ಪ್ರಾರ್ಥಿಸಿದರು. ಶ್ರೀ ಸೋಮೇಶ್ವರ ವಿದ್ಯಾಲಯದ ಕಾರ್ಯದರ್ಶಿ ಕೆ.ಎಂ. ಸುರೇಶ್ ಸ್ವಾಗತಿಸಿದರು. ವಿಶ್ವಪ್ರಭುದೇವ ಶಿವಾಚಾರ್ಯರು ಹಾಗೂ ಶಿವಮೊಗ್ಗದ ಶಾಂತಾ ಆನಂದ ನಿರೂಪಿಸಿದರು.

ಶ್ರೀ ಶ್ರೀಶೈಲ ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಜಗದ್ಗುರುಗಳು ಮಾತನಾಡಿ, ವೀರಶೈವ ಧರ್ಮ ಸನಾತನ ಧರ್ಮವಾಗಿದೆ. ಇಂದು ವೀರಶೈವ ಲಿಂಗಾಯತ ಸಮಜವನ್ನು ಹೆಚ್ಚು ಹೆಚ್ಚಾಗಿ ಸಂಘಟಿಸುವ ಕಾಲ ಬಂದಿದೆ. ಪ್ರತಿಯೊಬ್ಬರೂ ಒಗ್ಗಟ್ಟಾಗಿ ಧರ್ಮ ಕಟ್ಟುವ ಕೆಲಸ ಮಾಡಬೇಕಾಗಿದೆ. ಬರಲಿರುವ ಜಾತಿ ಗಣತಿಯಲ್ಲಿ ಯಾರಿಗೂ ಅನ್ಯಾಯವಾಗದಂತೆ ಕಾರ್ಯ ನಿರ್ವಹಿಸಬೇಕಾಗಿದೆ. ಪೀಠಾಚಾರ್ಯರು ಒಂದಾಗಿದ್ದಾರೆ. ಶಿವಾಚಾರ್ಯರು ಮತ್ತು ಸಮಾಜದ ಜನತೆ ಒಗ್ಗಟ್ಟಿನಿಂದ ಕೆಲಸ ಮಾಡಲಿ ಎಂದರು.

# ಮಹಿಳೆಯರ ರಕ್ಷಣೆ ಎಲ್ಲರ ಕರ್ತವ್ಯ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಹಿಳೆಯರ ರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದ್ದು, ಸುಂದರ, ಸೌಹಾರ್ದಯುತ ಸಮಾಜ ನಿರ್ಮಾಣಕ್ಕೆ ಮಹಿಳೆಯರನ್ನು ಗೌರವಿಸುವುದು ಮುಖ್ಯವಾಗಿದೆ ಎಂದು ಕಾನೂನು ಸಲಹೆಗಾರರು ಆರ್.ಎಸ್. ಹೊಸಮನಿ ಹೇಳಿದರು.

ಅವರು ಪಟ್ಟಣದ ಎಸ್.ಜೆ.ಜೆ.ಎಂ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ 'ಸಖಿ ಒನ್ ಸ್ಟಾಪ್ ಸೆಂಟರ್' ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಮಹಿಳೆಯರ ರಕ್ಷಣೆ ಎಂದರೆ ಕೇವಲ ನಮ್ಮ ಮನೆಯ ಹೆಣ್ಣುಮಕ್ಕಳ ಸಂರಕ್ಷಣೆ ಅಲ್ಲದೇ ಅಕ್ಕ-ಪಕ್ಕದ, ಸಮಾಜದಲ್ಲಿ ವಾಸಿಸುವ ಪ್ರತಿಯೊಬ್ಬ ಹೆಣ್ಣುಮಕ್ಕಳ, ಮಹಿಳೆಯರ ಸಂರಕ್ಷಣೆಯಾಗಿದೆ. ಮಹಿಳೆಯರ ಸಬಲೀಕರಣದ ಉದ್ದೇಶದಿಂದ ಸರಕಾರ ಹಲವಾರು ಕಾನೂನುಗಳನ್ನು ಜಾರಿಗೊಳಿಸಿದೆ. ಮಹಿಳಾ ಕಾನೂನುಗಳ ಕುರಿತು ಮಹಿಳೆಯರು ಹೆಚ್ಚು ಜಾಗೃತರಾಗಿರಬೇಕು ಎಂದರು.

ಅಧ್ಯಕ್ಷತೆಯನ್ನು ಪ್ರಾಚಾರ್ಯ ಎ.ಎಂ. ಅಂಗಡಿ ವಹಿಸಿದ್ದರು. ಸಿ.ಎಚ್. ದೊಡ್ಡಮನಿ, ಎಸ್.ಆರ್. ಹಿರೇಗೌಡ್ರ, ಮಂಜು ಅಳಲಗೇರಿ, ಸಂಗೀತಾ ಗುಂಜಳ, ಎಂ.ಬಿ. ಕುರಬಗೌಳಿ ಮುಂತಾದವರಿದ್ದರು.

# ಹುತಾತ್ಮ ರೈತರಿಗೆ ಶ್ರದ್ಧಾಂಜಲಿ

■ ವಿಜಯಸಾಕ್ಷಿ ಸುದ್ದಿ, ರೋಣ

ಧರ್ಮದ ಆಧಾರದಲ್ಲಿ ರೈತರನ್ನು ಒಡೆಯುತ್ತಿರುವ ರಾಜಕೀಯ ವ್ಯವಸ್ಥೆಯನ್ನು ನಾಡಿನ ರೈತರು ಖಂಡಿಸುವ ಮೂಲಕ ರೈತರಲ್ಲಿ ಏಕತೆ ಇನ್ನೂ ಜೀವಂತವಾಗಿದೆ ಎಂಬುದನ್ನು ರಾಜಕೀಯ ವ್ಯವಸ್ಥೆಗೆ ತಿಳಿಸಬೇಕಾದ ಅಗತ್ಯತೆಯಿದೆ ಎಂಬುದನ್ನು ರೈತರು ಅರಿಯಬೇಕು ಎಂದು ಸಿಐಟಿಯು ಮುಖಂಡ ಮಹೇಶ ಹಿರೇಮಠ ಹೇಳಿದರು.



ಅವರು ಸೋಮವಾರ ಪಟ್ಟಣದ ಸಾಹಿತ್ಯ ಭವನದಲ್ಲಿ ಜರುಗಿದ ನರಗುಂದ, ನವಲಗುಂದ ರೈತ ಬಂಡಾಯದಲ್ಲಿ ಮಡಿದ ಹುತಾತ್ಮ ರೈತರಿಗೆ ಶ್ರದ್ಧಾಂಜಲಿ ಹಾಗೂ ದೇವನಹಳ್ಳಿ ರೈತ ಹೋರಾಟದ ವಿಜಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ದೇಶದಲ್ಲಿ 500ಕ್ಕೂ ಹೆಚ್ಚು ರೈತ ಸಂಘಟನೆಗಳಿದ್ದು, ಅವುಗಳ ಸಿದ್ಧಾಂತ ಒಂದೇ ಆಗಿದೆ. ಎಲ್ಲ ಸಂಘಟನೆಗಳು ಸಹ ರೈತರ ಹಿತವನ್ನು ಬಯಸಿ ಹೋರಾಟ ಮಾಡುತ್ತವೆ. ಇದನ್ನು ಸಹಿಸದ ಬಂಡವಾಳಶಾಹಿಗಳು ಮತ್ತು ಪಟ್ಟಭದ್ರ ರಾಜಕೀಯ ವ್ಯವಸ್ಥೆ ರೈತರಲ್ಲಿ ಧರ್ಮ ಮತ್ತು ರಾಜಕೀಯ ವಿಷ ಬೀಜಗಳನ್ನು ಬಿತ್ತಿ ತಮ್ಮ ಲಾಭವನ್ನು ಹುಡುಕುತ್ತಿದೆ ಎಂದರು.

ಬಂಡವಾಳಶಾಹಿಗಳು ತಯಾರಿಸುವ ಎಲ್ಲ ಉತ್ಪನ್ನಗಳಿಗೆ ದರ ನಿಗದಿಪಡಿಸುವ ಸರಕಾರಗಳು ರೈತ ಬೆಳೆದ ಬೆಳೆಗಳಿಗೆ ಮಾತ್ರ ದರ ನಿಗದಿ ಮಾಡುತ್ತಿಲ್ಲ. ಕಾರಣ ಅವರಿಗೆ ರೈತರ ಏಳ್ಗೆ ಬೇಕಾಗಿಲ್ಲ. ಕೇಂದ್ರ ಸರಕಾರ ರೈತ ವಿರೋಧಿ ಕಾಯ್ದೆಗಳನ್ನು ಜಾರಿಗೊಳಿಸಲು ತರಲು ಹೊರಟ್ಟಿತ್ತು. ಇದನ್ನರಿತ ರೈತ ಹೋರಾಟಗಾರರು ಸತತ ಹೋರಾಟ ನಡೆಸಿ ರೈತ ವಿರೋಧಿ ಕಾಯ್ದೆಗಳು ಜಾರಿಗೆ ಬರದಂತೆ ನೋಡಿಕೊಂಡರು ಎಂದರು.

ಈ ಸಂದರ್ಭದಲ್ಲಿ ಮುತ್ತಣ್ಣ ಚೌಡರೆಡ್ಡಿ, ಕೂಡ್ಲೆಪ್ಪ ಗುಡಿಮನಿ, ಮೇಘರಾಜ ಭಾವಿ, ಲೋಕನಗೌಡ ಗೌಡ್ರ, ಮಾದೇಗೌಡ ಪಾಟೀಲ, ಕಸ್ತೂರಬಾಯಿ ಸೇರಿದಂತೆ ರೈತ ಮುಖಂಡರು ಉಪಸ್ಥಿತರಿದ್ದರು.


### "ವೆಲ್ಫೇರ್ ಪಾರ್ಟಿಯ ಸಾಬಿಹಾ ಪಟೇಲ್ ಪ್ರಶ್ನೆ

# ಮಹಿಳಾ ಸುರಕ್ಷತೆಗೆ ರಾಜ್ಯ ಸರ್ಕಾರ ಯಾವಾಗ ಗ್ಯಾರಂಟಿ ನೀಡಲಿದೆ?

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಹಿಳೆಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಕೊಲೆ ಪ್ರಕರಣಗಳಿಗೆ ಕೊನೆ ಎಂದು? ದೇಶ ಸ್ವಾತಂತ್ರ್ಯವಾಗಿ 76 ವರ್ಷಗಳಾದರೂ ಇನ್ನೂ ಮಹಿಳೆಯರಿಗೆ ತನ್ನ ಮಾನ, ಪ್ರಾಣ ಹಾಗೂ ಸ್ವಾತಂತ್ರ್ಯವಾಗಿ ಜೀವಿಸುವ ಹಕ್ಕನ್ನು ಒದಗಿಸುವುದರಲ್ಲಿ ಸರಕಾರಗಳು ಸಂಪೂರ್ಣ ರೀತಿಯಲ್ಲಿ ವಿಫಲವಾಗಿವೆ. ರಾಜ್ಯ ಸರಕಾರ ಮಹಿಳೆಯ ಸುರಕ್ಷತೆಯ ಗ್ಯಾರಂಟಿ ಕೊಡುವುದು ಯಾವಾಗ ? ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಕರ್ನಾಟಕ ರಾಜ್ಯ ಮಹಿಳಾ ವಿಭಾಗದ ಅಧ್ಯಕ್ಷೆ ಸಬೀಹಾ ಪಟೇಲ್ ಅವರು ಪ್ರಶ್ನಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಧರ್ಮಸ್ಥಳದಲ್ಲಿ ಕಳೆದ ಎರಡು ದಶಕಗಳಿಂದ ನಿರಂತರ ನಡೆಯುತ್ತಿರುವ ಮಹಿಳೆಯರ ಅತ್ಯಾಚಾರ, ಕೊಲೆ, ದೌರ್ಜನ್ಯ, ಸ್ವಾಭಾವಿಕ ಮರಣಗಳು, ಮಹಿಳೆಯರ ಹಾಗೂ ವಿದ್ಯಾರ್ಥಿನಿಯರ ನಾಪತ್ತೆಯಾಗಿರುವ ಹಲವಾರು ಪ್ರಕರಣಗಳು ದಾಖಲಾಗಿದ್ದರೂ ಸರಕಾರ ಇದಕ್ಕೆ ತೀವ್ರವಾದ ತನಿಖೆ ನಡೆಸುವುದರಲ್ಲಿ ವಿಫಲವಾಗಿದೆ. ಜುಲೈ 3ರಂದು ವ್ಯಕ್ತಿಯೊಬ್ಬನು ಸಾಕ್ಷಿ ಸಮೇತ ದೂರು ಸಲ್ಲಿಸಿದರೂ ತಕ್ಷಣವೇ ಸರಕಾರ ಯಾವುದೇ ಕ್ರಮ ಕೈಗೊಳ್ಳಲಿಲ್ಲ. ಹಲವಾರು ಶವಗಳನ್ನು ಅಲ್ಲಿ ಸಮಾಧಿ ಮಾಡಲಾಗಿದೆ. ಹಲವಾರು ಹೋರಾಟಗಾರರು ರಾಜಕೀಯ ಪಕ್ಷಗಳು ಒತ್ತಡವನ್ನು ಹಾಕಿದ ಮೇಲೆ ಸರಕಾರ ಇದೀಗ ಎಸ್ ಐ ಟಿ ರಚನೆಗೆ ಆದೇಶ ನೀಡಿದೆ.




ಈ ಪ್ರಕರಣಗಳ ಬಗ್ಗೆ ಎಸ್ ಐ ಟಿ ರಚಿಸಿದ ಸರಕಾರ ಪಾರದರ್ಶಕತೆಯಿಂದ ಅತ್ಯಂತ ತೀವ್ರವಾಗಿ ತನಿಖೆ ನಡೆಸಿ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು ಹಾಗೂ ಧರ್ಮಸ್ಥಳದ ಭಾಗದಲ್ಲಿ ಮತ್ತು ರಾಜ್ಯದ ಇತರ ಭಾಗಗಳಲ್ಲಿ ಮುಂದೆ ಇಂತಹ ಅತ್ಯಾಚಾರ ಕೊಲೆ ಪ್ರಕರಣಗಳಾಗದೆ ಮಹಿಳೆಯರಿಗೆ ರಕ್ಷಣೆ ನೀಡಬೇಕೆಂದು ರಾಜ್ಯ ಮಹಿಳಾ ವಿಭಾಗ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಕರ್ನಾಟಕ ಸರಕಾರಕ್ಕೆ ಅಗ್ರಹಿಸಿದೆ.

# ಪಟಾಕಿ ಕಾರ್ಖಾನೆಯಲ್ಲಿ ಭಾರೀ ಸ್ಫೋಟ: ಮೂವರು ದುರ್ಮರಣ

■ ವಿಜಯಸಾಕ್ಷಿ ಸುದ್ದಿ, ಚೆನ್ನೈ

ಪಟಾಕಿ ಕಾರ್ಖಾನೆಯಲ್ಲಿ ಭಾರೀ ಸ್ಫೋಟ ಸಂಭವಿಸಿ ಮೂವರು ಸಾವನ್ನಪ್ಪಿದ ಘಟನೆ ತಮಿಳುನಾಡಿನ ವಿರುಧ್‌ನಗರ ಜಿಲ್ಲೆಯ ಶಿವಕಾಶಿ ಬಳಿಯ ನಾರಣಾಪುರಂದಲ್ಲಿ ಜರುಗಿದೆ.

ಘಟನೆಯಲ್ಲಿ ಮೂವರು ಸಾವನ್ನಪ್ಪಿದ್ದರೆ, ಮೂವರಿಗೆ ಗಂಭೀರ ಗಾಯಗಳಾಗಿದೆ. ಗಾಯಾಳುಗಳನ್ನು ಆಸ್ಪತ್ರೆಗೆ ರವಾನಿಸಲಾಗಿದೆ.

ಈ ಸಂದರ್ಭ ದೊಡ್ಡ ಮಟ್ಟದ ಸ್ಫೋಟದ ಶಬ್ದ ಕೇಳಿ ಬಂತು. ಗಾಬರಿಯಲ್ಲಿ ಮನೆಯಿಂದ ಹೊರಗೆ ಬಂದಾಗ ಪಟಾಕಿ ಅಂಗಡಿ ಸ್ಫೋಟಗೊಂಡಿರುವುದು ಗೋಚರಿಸಿದೆ ಎಂದು ಸ್ಥಳೀಯರು ವಿವರಿಸಿದ್ದಾರೆ. ಘಟನಾ ರಕ್ಷಣಾ ತಂಡಗಳು ಮತ್ತು ಅಗ್ನಿಶಾಮಕ ದಳ ಸ್ಥಳಕ್ಕೆ ಧಾವಿಸಿ, ಬೆಂಕಿ ನಂದಿಸುವ ಕಾರ್ಯ ಮಾಡುತ್ತಿದೆ.

# ನಡು ಬೀದಿಯಲ್ಲೇ ಅಧ್ಯಕ್ಷ-ಸದಸ್ಯರ ನಡುವೆ ಹೊಡೆದಾಟ..!

■ ವಿಜಯಸಾಕ್ಷಿ ಸುದ್ದಿ, ದೊಡ್ಡಬಳ್ಳಾಪುರ

ನಡು ಬೀದಿಯಲ್ಲಿ ಬಟ್ಟೆ ಹರಿದು ಹೋಗುವ ರೀತಿಯಲ್ಲಿ ಪಂಚಾಯಿತಿ ಅಧ್ಯಕ್ಷ ಮತ್ತು ಸದಸ್ಯರ ಹೊಡೆದಾಡಿಕೊಂಡಿರುವ ಘಟನೆ ದೊಡ್ಡಬಳ್ಳಾಪುರದ ಎಸಿ ಕಚೇರಿ ಬಳಿ ನಡೆದಿದೆ.

ನೆಲವಂಗಲದ ಅರೆಬೊಮ್ಮನಹಳ್ಳಿಯಿಂದ ಸದಸ್ಯರು ರಾಜೀನಾಮೆ ಸಲ್ಲಿಸಲು ಒಟ್ಟಾಗಿ ಆಗಮಿಸಿದ್ದರು. ಈ ಸಂದರ್ಭದಲ್ಲಿ ಅಧ್ಯಕ್ಷ ರಂಗಸ್ವಾಮಿ ರಾಜೀನಾಮೆ ನೀಡಲ್ಲ ಎಂದಾಗ ಇತರೆ ಸದಸ್ಯರು ಹಲ್ಲೆ ಮಾಡಿದ್ದಾರೆಂದು ಆರೋಪಿಸಲಾಗಿದೆ. ಅಧ್ಯಕ್ಷ ರಂಗಸ್ವಾಮಿ ಮೇಲೆ ಅವಿಶ್ವಾಸಕ್ಕೆ ಮುಂದಾಗಿದ್ದು, ದಲಿತ ಅಧ್ಯಕ್ಷ ಎಂಬ ಕಾರಣಕ್ಕೆ ಹಲ್ಲೆ ಮಾಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಹಲ್ಲೆಗೆ ಒಳಗಾದ ಅಧ್ಯಕ್ಷ ಸದ್ಯ ಪೊಲೀಸರ ರಕ್ಷಣೆಯಲ್ಲಿ ಇದ್ದಾರೆ. ಘಟನೆ ದೊಡ್ಡಬಳ್ಳಾಪುರ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

# ಉಪರಾಷ್ಟ್ರಪತಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಜಗದೀಪ್ ಧನ್ಕರ್!

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತದ ಉಪರಾಷ್ಟ್ರಪತಿ ಜಗದೀಪ್ ಧನ್ಕರ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಬರೆದ ಪತ್ರದಲ್ಲಿ ತಮ್ಮ ರಾಜೀನಾಮೆ ಭಾರತದ ಸಂವಿಧಾನದ 67(ಎ) ವಿಧಿಗೆ ಅನುಗುಣವಾಗಿದೆ ಎಂದು ಜಗದೀಪ್ ಧನ್ಕರ್ ಹೇಳಿದ್ದಾರೆ. ಆರೋಗ್ಯ ಸಮಸ್ಯೆ ಮತ್ತು ವೈದ್ಯಕೀಯ ಸಲಹೆಯನ್ನು ಪಾಲಿಸುವ ಅಗತ್ಯವನ್ನು ಉಲ್ಲೇಖಿಸಿರುವ ಜಗದೀಪ್ ಧನ್ಕರ್ ಅವರು ಭಾರತದ ಉಪರಾಷ್ಟ್ರಪತಿ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ರಾಜೀನಾಮೆ ನೀಡಿದ್ದಾರೆ.



ಪತ್ರದಲ್ಲಿ ಏನಿದೆ?

ದ್ರೌಪದಿ ಮುರ್ಮು ಅವರಿಗೆ ಬರೆದ ಪತ್ರದಲ್ಲಿ ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿದ ಜಗದೀಪ್ ಧನ್ಕರ್, ರಾಷ್ಟ್ರಪತಿಗಳ ಬೆಂಬಲ ಮತ್ತು ತಮ್ಮ ಅಧಿಕಾರಾವಧಿಯಲ್ಲಿ ಅವರು ಹಂಚಿಕೊಂಡ ಸೌಹಾರ್ದಯುತ ಕಾರ್ಯ ಸಂಬಂಧಕ್ಕಾಗಿ ಧನ್ಯವಾದಗಳನ್ನು ಅರ್ಪಿಸಿದರು. ಪ್ರಧಾನಿ ನರೇಂದ್ರ ಮೋದಿ ಮತ್ತು ಸಚಿವ ಸಂಪುಟಕ್ಕೆ ಅವರು ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿದರು. ಪ್ರಧಾನಿಯವರ ಸಹಕಾರ ಮತ್ತು ಬೆಂಬಲ ಅಮೂಲ್ಯವಾದುದು. ನನ್ನ ಅಧಿಕಾರದ ಅವಧಿಯಲ್ಲಿ ಬಹಳಷ್ಟು ಕಲಿತಿದ್ದೇನೆ ಎಂದು ಅವರು ಹೇಳಿದ್ದಾರೆ.

### ಎಪಿಎಂಸಿ ಆವರಣದಲ್ಲಿ ನೂತನ ಗಣಪತಿ ದೇವಸ್ಥಾನ ನಿರ್ಮಾಣ ಕಾರ್ಯ ಮುಕ್ತಾಯ

# ದೇವಸ್ಥಾನದ ಲೋಕಾರ್ಪಣೆ ಕಾರ್ಯಕ್ರಮ ಜು.26ರಿಂದ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಎಪಿಎಂಸಿ ಆವರಣದಲ್ಲಿ ನಿರ್ಮಾಣಗೊಂಡ ನೂತನ ಗಣಪತಿ ದೇವಸ್ಥಾನದ ಲೋಕಾರ್ಪಣೆ ಮತ್ತು ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ಜುಲೈ 26, 27 ಮತ್ತು 28ರಂದು ವಿಜೃಂಭಣೆಯಿಂದ ನಡೆಯಲಿದೆ ಎಂದು ಎಪಿಎಂಸಿ ವರ್ತಕರ ಸಂಘದ ಅಧ್ಯಕ್ಷ ಓಂಪ್ರಕಾಶ ಜೈನ್ ಹೇಳಿದರು.

ಅವರು ಭಾನುವಾರ ಈ ಕುರಿತು ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಜ.ಶ್ರೀ ವೀರಗಂಗಾಧರ ಕೃಷಿ ಉತ್ಪನ್ನ ಮಾರುಕಟ್ಟೆ (ಎಪಿಎಂಸಿ) ಆವರಣದಲ್ಲಿ ಗಣಪತಿ ದೇವಸ್ಥಾನ ನಿರ್ಮಾಣ ಮಾಡಬೇಕೆನ್ನುವ ಇಚ್ಛೆಯನ್ನು ವ್ಯಾಪಾರಸ್ಥರು ಹೊಂದಿದ್ದರು. ಅದಕ್ಕಾಗಿ ಎಪಿಎಂಸಿ ವರ್ತಕರೆಲ್ಲ ದೇಣಿಗೆ ಸಂಗ್ರಹಿಸಿ ವರ್ಷದ ಹಿಂದೆ ದೇವಸ್ಥಾನ ನಿರ್ಮಾಣ ಕಾರ್ಯ ಪ್ರಾರಂಭಿಸಿದ್ದರು. ಸಂಪೂರ್ಣವಾಗಿ ಕೊಲ್ಲಾಪುರದ ಹತ್ತಿರ ದೊರೆಯುವ ಜ್ಯೋತಿರ್ಭಾ ಕಲ್ಲುಗಳಿಂದ ಅಲ್ಲಿನ ಶಿಲ್ಪಿಗಳಿಂದ ರಾಮಮಂದಿರ ಸ್ವರೂಪದ ದೇವಸ್ಥಾನ ನಿರ್ಮಾಣ ಪೂರ್ಣಗೊಂಡಿದೆ ಎಂದು ತಿಳಿಸಿದರು. ಎಪಿಎಂಸಿ ವರ್ತಕರ ಸಂಘದ ಕಾರ್ಯದರ್ಶಿ ಎಸ್.ಕೆ. ಕಾಳಪ್ಪನವರ ಮಾತನಾಡಿ, ರಂಭಾಪುರಿ ಜ. ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದ ಕೃಪಾಶೀರ್ವಾದ ಹಾಗೂ ನೊಣವಿನಕೆರೆ ಕಾಡಸಿದ್ಧೇಶ್ವರ ಮಠದ ಡಾ. ಕರಿವೃಷಭ ದೇಶಿಕೇಂದ್ರ ಶಿವಯೋಗಿಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ದೇವಸ್ಥಾನ ಲೋಕಾರ್ಪಣೆ ನಡೆಯಲಿದೆ. ಜು. 26ರಂದು ಗಣಪತಿ, ಈಶ್ವರ, ಬಸವಣ್ಣ, ಆಂಜನೇಯ ಹಾಗೂ ನಾಗದೇವತೆಗಳ ಮೂರ್ತಿಗಳ ಮೆರವಣಿಗೆ, ಜು.27ರಂದು ಹೋಮ, ಹವನ, ಪೂಜೆ, ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ಜು.28ರಂದು ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ, ದೇವಸ್ಥಾನ ಲೋಕಾರ್ಪಣೆ ಮತ್ತು ಅಂದೇ 12 ಗಂಟೆಗೆ ಧರ್ಮ ಸಭೆ ನಡೆಯಲಿದೆ. ಅನೇಕ ಮಠಾಧೀಶರು, ಸಂಸದರು, ಶಾಸಕರು, ಮಾಜಿ ಶಾಸಕರು, ಪುರಸಭೆ ಅಧ್ಯಕ್ಷರು, ಜನ ಪ್ರತಿನಿಧಿಗಳು, ಮುಖಂಡರು ಪಾಲ್ಗೊಳ್ಳಲಿದ್ದಾರೆ. ಈ ಮೂರು ದಿನಗಳ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಿಭಾಯಿಸುವ ನಿಟ್ಟಿನಲ್ಲಿ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.



ಈ ವೇಳೆ ಮಹಾದೇವಪ್ಪ ರಗಟಿ, ಸಿದ್ದನಗೌಡ ಬಳ್ಳೊಳ್ಳಿ, ಸಂಗಣ್ಣ ಹನುಮಸಾಗರ, ಶಿವಯೋಗಿ ಗಡ್ಡದೇವರಮಠ, ಬಸವರಾಜ ಮಹಾಂತಶೆಟ್ಟರ, ಗಣೇಶ ಬೇವಿನಮರದ, ತೋಂಟೇಶ ಮಾನ್ವಿ, ವಿಜಯಕುಮಾರ ಹತ್ತಿಕಾಳ, ಸಂತೋಷ ಬಾಳಿಕಾಯಿ, ರಾಜು ಕೊಟಗಿ, ಪುಲಕೇಶಿ ಉಪನಾಳ, ಶಿವಯೋಗಿ ವಡಕಣ್ಣವರ, ವಿಜಯ ಬೂದಿಹಾಳ, ರಾಘವೇಂದ್ರ ಸದಾವರ್ತಿ ಸೇರಿದಂತೆ ಅನೇಕರಿದ್ದರು.

ರಾಜಸ್ಥಾನದ ಜೈಪೂರ ವೈಟ್ ಮಾರ್ಬಲ್‌ನಿಂದ ಸುಂದರ ಗಣೇಶನ ಮೂರ್ತಿ ನಿರ್ಮಾಣವಾಗಿದೆ. ದೇವಸ್ಥಾನದ ಪ್ರಾಂಗಣದಲ್ಲಿನ ವಿವಿಧ ದೇವರ ಮೂರ್ತಿಗಳನ್ನು ಲಕ್ಕುಂಡಿಯ ಕಲಾವಿದರು ನಿರ್ಮಿಸಿದ್ದಾರೆ. ದೇವಸ್ಥಾನ ಲೋಕಾರ್ಪಣೆ ಕಾರ್ಯಕ್ರಮವನ್ನು ಸಾಂಪ್ರದಾಯಿಕವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನೆರವೇರಿಸಲಾಗುತ್ತಿದೆ. ರೈತರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಓಂಪ್ರಕಾಶ ಜೈನ್ ಮನವಿ ಮಾಡಿದರು.

## ರವಿ ಹೊಂಬಾಳೆಗೆ ರಾಷ್ಟ್ರೀಯ ನಿಫಾ ಅವಾರ್ಡ್



■ವಿಜಯಸಾಕ್ಷಿ ಸುದ್ದಿ, ಗದಗ

ನಿಫಾ ವತಿಯಿಂದ ಕೊಡಲ್ಪಡುವ ಪ್ರತಿಷ್ಠಿತ ಪ್ರಶಸ್ತಿ ನಿಫಾ (NIFAA) ಅವಾರ್ಡ್‌ಗೆ ಸಾಮಾಜಿಕ ಸೇವಾ ವಿಭಾಗದಲ್ಲಿ ಗದುಗಿನ ರವಿ ಹೊಂಬಾಳಿ ಅವರು ಆಯ್ಕೆಯಾಗಿದ್ದಾರೆ. ನವದೆಹಲಿ ಯಲ್ಲಿ ನಡೆಯುವ ನಿಫಾದ ರಜತ ಮಹೋತ್ಸವದ ಸಂದರ್ಭದಲ್ಲಿ ರಾಷ್ಟ್ರೀಯ ಸಮ್ಮೇಳನದ ಕಾರ್ಯಕ್ರಮದಲ್ಲಿ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ರವಿ ಅವರು 7 ವರ್ಷಗಳಿಂದ ಯುವ ಜನರ ಜಾಗೃತಿ, ಸಾಮಾಜಿಕ ಸೇವೆ ಮತ್ತು ರಾಷ್ಟ್ರ ನಿರ್ಮಾಣಕ್ಕಾಗಿ ಕಾರ್ಯನಿರ್ವಹಿಸುತ್ತಿರುವ ಹಿನ್ನೆಲೆಯಲ್ಲಿ ಈ ಪ್ರಶಸ್ತಿಗೆ ಆಯ್ಕೆಗೊಂಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಸಾರ್ವಜನಿಕರ ಗಮನಕ್ಕೆ

▶▶ಮೊದಲನೇ ಪುಟದಿಂದ

ಟ್ರ್ಯಾಬ್‌ಗ್ಳ್‌ನ್ನು ಮಲ್ಲಸಮುದ್ರದಲ್ಲಿರುವ ಗದಗ ಜಿಲ್ಲಾ ಪೊಲೀಸ್ ಸಶಸ್ತ್ರ ಮೀಸಲು ಪಡೆಯ ವಾಹನ ಸಾರಿಗೆ ವಿಭಾಗದ ಆವರಣದಲ್ಲಿ ದಿನಾಂಕ:25-7-2025 ರಂದು ಬೆಳಗ್ಗೆ 11-00 ಗಂಟೆಗೆ ಬಹಿರಂಗ ಹರಾಜ ಮಾಡಲಾಗುವುದು. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಡಿ.ಎಸ್.ಪಿ ಡಿಎಆರ್/ ಆರ್.ಪಿ.ಐ ಡಿಎಆರ್ ಮಲ್ಲಸಮುದ್ರ ರವರ ಕಚೇರಿಯಲ್ಲಿ ಸಂಪರ್ಕಿಸಬಹುದಾಗಿದೆ. ಸಂಪರ್ಕಿಸಬೇಕಾದ ದೂರವಾಣಿ ಸಂ. ಡಿ.ಎಸ್.ಪಿ ಡಿಎಆರ್ ಗದಗ -9480804406, ಆರ್.ಪಿ.ಐ ಡಿಎಆರ್ ಗದಗ -9945756307 ಆಗಿರುತ್ತದೆ.

### ಅಧಿಕಾರಿಗಳ ಎಡವಟ್ಟಿನಿಂದ ನರಗುಂದ ರೈತ ಬಂಡಾಯ; ಶಾಸಕ ಸಿ.ಸಿ. ಪಾಟೀಲ

## ಬಿಜೆಪಿಯಿಂದಲೇ ಕಳಸಾ-ಬಂಡೂರಿ ಯೋಜನೆಯ ಪ್ರಗತಿ

■ವಿಜಯಸಾಕ್ಷಿ ಸುದ್ದಿ, ನರಗುಂದ

ಕಳಸಾ-ಬಂಡೂರಿ ಯೋಜನೆ ಅನುಷ್ಠಾನದ ವಿಷಯದಲ್ಲಿ ಮುಂದುವರೆದಿದ್ದು ಬಿಜೆಪಿ ಸರ್ಕಾರ. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅವರು ಯೋಜನೆಗೆ ನೂರಾರು ಕೋಟಿ ರೂಪಾಯಿ ಅನುದಾನ ಕೊಟ್ಟಿದ್ದರಿಂದ ಕಾಮಗಾರಿಗೆ ಈಗಾಗಲೇ ಭೂಮಿಪೂಜೆ ನೆರವೇರಿಸಿದ್ದೇವೆ. ಈ ಮಹತ್ವದ ಕಾಮಗಾರಿ ಮುಗಿಸುವ ಜವಾಬ್ದಾರಿಯನ್ನು ಬಿಜೆಪಿ ಪಕ್ಷದಿಂದ ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಲಾಗುವುದು ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1980ರಲ್ಲಿ ಅಧಿಕಾರಿಗಳು ಮಾಡಿದ ಎಡವಟ್ಟಿಗೆ ನರಗುಂದ ರೈತ ಬಂಡಾಯ ನಡೆಯಿತು. ರೈತರು ನಡೆಸಿದ 40 ದಿನಗಳ ನಿರಂತರ ಹೋರಾಟಕ್ಕೆ ಅಂದಿನ ತಹಸೀಲ್ದಾರರು ಉದ್ಧಟತನ, ಅಗೌರವ ತೋರಿದ್ದರಿಂದ



ಅಮಾಯಕ ರೈತರು, ಪೊಲೀಸ್ ಸಿಬ್ಬಂದಿ ಹುತಾತ್ಮರಾಗಿದ್ದಾರೆ. ಹುತಾತ್ಮ ರೈತರ ಸ್ಮರಣಾರ್ಥ ಸಚಿವ ಎಚ್.ಕೆ. ಪಾಟೀಲ ಭೂಮಿಪೂಜೆ ನೆರವೇರಿಸಿದ್ದಾರೆ. ಇದಕ್ಕೆ ಭೂದಾನ ಮಾಡಿದ ದೇಸಾಯಿಗೌಡ ಪಾಟೀಲ, ಸಲೀಂಸಾಬ ಮೇಗಲಮನಿ ಅವರ ಕಾರ್ಯ ಸ್ಮರಣೀಯ. ಆದರೆ, ಈ ಹೋರಾಟಕ್ಕೆ ಸುದೀರ್ಘ 45 ವರ್ಷ ಗತಿಸಿದ ಬಳಿಕ ಸ್ಮಾರಕ ನಿರ್ಮಿಸುತ್ತಿರುವುದು ವೈಯಕ್ತಿಕವಾಗಿ ನನಗೆ ನೋವು ತರಿಸಿದೆ ಎಂದರು.

ಈ ಹಿಂದೆ ಕಳಸಾ-ಬಂಡೂರಿ ಯೋಜನೆ ಅನುಷ್ಠಾನಕ್ಕಾಗಿ 69 ದಿನಗಳ ನಿರಂತರ ಪ್ರತಿಭಟನೆ, ಪಾದಯಾತ್ರೆ ಮಾಡಿದ್ದೇವೆ. ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಬಿ.ಎಸ್. ಯಡಿಯೂರಪ್ಪನವರು 100 ಕೋಟಿ ರೂಪಾಯಿ ಅನುದಾನ ನೀಡಿದ್ದರಿಂದ ಕೆ.ಎಸ್. ಈಶ್ವರಪ್ಪ ನೇತೃತ್ವದಲ್ಲಿ ಯೋಜನೆಗೆ ಭೂಮಿಪೂಜೆ ನೆರವೇರಿಸಿದ್ದೇವೆ. ನರಗುಂದ ಮತಕ್ಷೇತ್ರದಲ್ಲಿ ಸಾವಿರಾರು ಕೋಟಿ ರೂಪಾಯಿ ವಿವಿಧ ಕಾಮಗಾರಿಗಳನ್ನು ಮಾಡಿದ್ದೇನೆ. ಆದರೆ, ಇದುವರೆಗೆ ಕಳಸಾ ಬಂಡೂರಿ ನೀರು ಬಾರದಿರುವ ನೋವು ಕೂಡ ನನಗಿದೆ. ಈ ಯೋಜನೆ ಏನಾದರೂ ಸ್ವಲ್ಪ ಪ್ರಗತಿ ಕಂಡಿದ್ದರೆ ಅದಕ್ಕೆ ಬಿಜೆಪಿಯೇ ಕಾರಣ ಎಂದರು. ಕೇಂದ್ರ ಹಾಗೂ ಗೋವಾದವರ ಮನವೊಲಿಸಿ ಯೋಜನೆ ಮುಗಿಸುವ ಜವಾಬ್ದಾರಿಯೂ ಬಿಜೆಪಿ ವಹಿಸಲಿದೆ. ಅಪರ ಕೃಷ್ಣಾ ಮೇಲ್ದಂಡೆ ಹಾಗೂ ಕಳಸಾ ಬಂಡೂರಿ ಯೋಜನೆ ಸೇರಿದಂತೆ ರಾಜ್ಯದ ಪ್ರತಿಯೊಂದು ಯೋಜನೆಗಳ ಕುರಿತು ಕಾಂಗ್ರೆಸ್‌ನವರು ಮನವಿ ಮಾಡಿಕೊಂಡಿಲ್ಲ. ರಾಜ್ಯದ ರೈತರ ಹಿತದೃಷ್ಟಿಯಿಂದ ಡಿ.ಕೆ. ಶಿವಕುಮಾರ ಸೇರಿ ರಾಜ್ಯ ಸರ್ಕಾರದ ಪ್ರತಿಯೊಬ್ಬರೂ ಕಾನೂನಾತ್ಮಕ ಮನವಿ ಮಾಡಿದರೆ ಕೇಂದ್ರದಿಂದ ಎಲ್ಲ ಯೋಜನೆಗಳಿಗೂ ನ್ಯಾಯ ದೊರೆಯುತ್ತದೆ ಎಂದರು.

ಕೂಡಲಸಂಗಮ ಶ್ರೀಬಸವಜಯ ಮೃತ್ಯುಂಜಯ ಶ್ರೀಗಳು, ಶಾಸಕ ವಿಜಯಾನಂದ ಕಾಶಪ್ಪನವರ ನಡುವಿನ ಬಿನ್ನಾಭಿಪ್ರಾಯ ಬಗೆಹರಿಯಲಿ ಎಂಬುದು ನಾಡಿನ ಪಂಚಮಸಾಲಿ ಸಮಾಜದವರ ಆಶಯ. ಶ್ರೀಗಳಿಗೆ ಹಿಂಸೆ ಆಗಿದ್ದರಿಂದ ಅವರ ಆರೋಗ್ಯದಲ್ಲಿ ಏರುಪೇರಾಗಿತ್ತು. ಆದರೆ, ನಿನ್ನೆಯ ದಿನ ಗುಣಮುಖರಾಗಿ ಬಂದಿದ್ದಾರೆ. ನಮ್ಮ ಸಮಾಜದ ಎಲ್ಲ ಹಿರಿಯರು, ಶಾಸಕ, ಸಚಿವರು, ಸಂಸದರು, ವಿಧಾನಪರಿಷತ್ತಿನ ಸದಸ್ಯರು ಕೂಡಿ ಕೆಲವೇ ದಿನಗಳಲ್ಲಿ ಬೆಂಗಳೂರಿನಲ್ಲಿ ಮಹತ್ವದ ಸಂದಾನ ಸಭೆ ಏರ್ಪಡಿಸಿ ಸಮಸ್ಯೆ ಬಗೆಹರಿಸುವ ಪ್ರಾಮಾಣಿಕ ಪ್ರಯತ್ನಮಾಡುತ್ತೇವೆ.

ಬಿಜೆಪಿ ಸರ್ಕಾರದ ವಿರುದ್ಧ ಕೂಡಲಸಂಗಮ ಶ್ರೀಗಳು ಪ್ರತಿಭಟನೆ ಮಾಡುವಾಗ ವಿಜಯಾನಂದ ಕಾಶಪ್ಪನವರ ಅವರು, ನಮ್ಮ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ 24 ಗಂಟೆಯೊಳಗೆ 2ಎ ಮೀಸಲಾತಿ ಕೊಡಿಸುವ ಭರವಸೆ ನೀಡಿದ್ದರು. ಕೊಟ್ಟ ಭರವಸೆಯಂತೆ ಕಾಶಪ್ಪನವರ ಈಗಲಾದರೂ ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ಕೊಡಿಸಲಿ ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಎಸ್.ಆರ್. ಪಾಟೀಲ, ಎಂ.ಎಚ್. ತಿಮ್ಮನಗೌಡ್ರ, ಬಿ.ಬಿ. ಐನಾಪೂರ, ಉಮೇಶಗೌಡ ಪಾಟೀಲ, ಎ.ಎಂ. ಹುಡೇದ, ನಿಂಗಣ್ಣ ಗಾಡಿ, ಪ್ರಕಾಶಗೌಡ ತಿರಕನಗೌಡ್ರ, ನಾಗನಗೌಡ ತಿಮ್ಮನಗೌಡ್ರ, ಎಸ್.ಬಿ. ಸುಂಕದ, ನಾಗರಾಜ ನೆಗಳೂರ, ಹಸನ ನವದಿ, ಗುರಪ್ಪ ಆದೆಪ್ಪನವರ ಇತರರಿದ್ದರು.

> ಚಪ್ಪಾಳೆ ಒಂದೇ ಕೈಯಿಂದ ಆಗುವುದಿಲ್ಲ. ಸಮಸ್ಯೆ ಬಗೆಹರಿಯಬೇಕಾದರೆ ಶ್ರೀಗಳು ಹಾಗೂ ಕಾಶಪ್ಪನವರ ಅವರು ತಲಾ ಎರಡು ಹೆಜ್ಜೆ ಹಿಂದೆ ಸರಿಯಬೇಕಾಗುತ್ತದೆ. ಇದರಿಂದ ಸಮಾಜಕ್ಕೆ ಒಳ್ಳೆಯ ಸಂದೇಶ ರವಾನಿಸಿದಂತಾಗುತ್ತದೆ. ಆದರೆ, ಇದು ಸಾಧ್ಯವಾಗದಿದ್ದರೆ ಶ್ರೀಗಳಿಗೆ ಅನುಕೂಲವಾಗುವಂತೆ ಎಲ್ಲರೂ ಅಪೇಕ್ಷೆಪಟ್ಟ ಗ್ರಾಮ, ನಗರದಲ್ಲಿ ಮತ್ತೊಂದು ಶಾಖಾಪೀಠವನ್ನು ಮಾಡಿ ಶ್ರೀಗಳಿಗೆ ಪ್ರತಿಯೊಬ್ಬರೂ ಬೆನ್ನೆಲುಬಾಗಿ ನಿಲ್ಲುತ್ತೇವೆ ಎಂದು ಶಾಸಕ ಸಿ.ಸಿ. ಪಾಟೀಲ ತಿಳಿಸಿದರು.

### ತೋಂ. ಸಿದ್ಧೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ, ಶೈಕ್ಷಣಿಕ ಚಟುವಟಿಕೆಗಳ ಉದ್ಘಾಟನೆ

## ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಯೇ ಶಿಕ್ಷಣ

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಸ್ಪರ್ಧಾತ್ಮಕ ಪ್ರಪಂಚದಲ್ಲಿ ವಿದ್ಯಾರ್ಥಿಗಳು ಭವಿಷ್ಯದ ಬಗ್ಗೆ ಹೆಚ್ಚು ಶ್ರಮವಹಿಸಬೇಕಾಗಿದೆ. ಹೆಚ್ಚು ಅಂಕ ಗಳಿಸಿ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಮಾದರಿಯಾಗಿ ಇಟ್ಟುಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ಅಂದಾಗ ಮಾತ್ರ ವಿದ್ಯಾರ್ಥಿ ಸರ್ವತೋಮುಖ ಬೆಳವಣಿಗೆ ಹೊಂದಲು ಸಾಧ್ಯ ಎಂದು ಪೊಲೀಸ್ ಉಪ ಅಧೀಕ್ಷಕ ಎಂ.ಐ. ಸಜ್ಜನ್ ಹೇಳಿದರು.

ನಗರದ ತೋಂಟದಾರ್ಯ ಕಲ್ಯಾಣಕೇಂದ್ರದಲ್ಲಿ ಇತ್ತೀಚೆಗೆ ಜರುಗಿದ ಸ್ಥಳೀಯ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ತೋಂಟದ ಸಿದ್ಧೇಶ್ವರ ವಿಜ್ಞಾನ ವಾಣಿಜ್ಯ ಹಾಗೂ ಕಲಾ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ 2025-26ನೇ ಸಾಲಿನ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ಸ್ವಾಗತ, ಶೈಕ್ಷಣಿಕ ಚಟುವಟಿಕೆಗಳ ಉದ್ಘಾಟನೆ ಮತ್ತು ಮಾರ್ಚ್-2025ರಲ್ಲಿ ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಅತಿಥಿಗಳಾಗಿ ಆಗಮಿಸಿದ್ದ ಡಾ. ಉಮೇಶ ಪುರದ ಮಾತನಾಡಿ, ಸೋಲು ಕಂಡಾಗ ಕುಗ್ಗದೇ ಧೈರ್ಯವಾಗಿ ಗೆಲುವು ಸಾಧಿಸುವುದೇ ನಿಜವಾದ ಯಶಸ್ಸು. ವಿದ್ಯಾರ್ಥಿಗಳ ಅಂತಃಸತ್ವವನ್ನು ವೃದ್ಧಿಸುವ, ಅರಿವು ಮೂಡಿಸುವ ಉದ್ದೇಶವನ್ನು ಈ ಸಂಸ್ಥೆ ಹೊಂದಿದೆ. ಇಲ್ಲಿ ಸಮರ್ಥ ಆಡಳಿತ ಮಂಡಳಿ ಸೇವಾರೂಪದಲ್ಲಿ ಕರ್ತವ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶ್ರೀ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಮಕ್ಕಳನ್ನು ಪ್ರತಿಭಾವಂತರನ್ನಾಗಿ, ಕೀರ್ತಿವಂತರನ್ನಾಗಿ, ಗುಣವಂತರನ್ನಾಗಿ ಮಾಡುವುದು ಪ್ರತಿಯೊಬ್ಬ ಶಿಕ್ಷಕರ ಕೈಯಲ್ಲಿದೆ. ಅಂತಹ ಕಾರ್ಯವನ್ನು ಮಾಡಿದ ಎಲ್ಲ ಶಿಕ್ಷಕ ವೃಂದಕ್ಕೂ ಅಭಿನಂದನೆ ತಿಳಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರರ, ವಿದ್ಯಾರ್ಥಿ ಪ್ರತಿನಿಧಿ ಸಾಹಿಲ್ ಚವಡಿ, ಲಕ್ಷ್ಮೀ ಚೌದ್ರಿ ಹಾಜರಿದ್ದರು. ಸಿ.ಎಂ. ಪತ್ತಾರ ವಿದ್ಯಾರ್ಥಿಗಳಿಗೆ ಕಾಲೇಜು ಸಂಸತ್ತಿನ ಪ್ರಮಾಣ ವಚನ ಬೋಧಿಸಿದರು. ಉಮಾ ನಾಯ್ಕಲ್ ಹಾಗೂ ಸಂಗಡಿಗರು ವಚನ ಪ್ರಾರ್ಥನೆ ಹಾಡಿದರು. ಜ.ತೋ. ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ಪ್ರಾಸ್ತವಿಕವಾಗಿ ಮಾತನಾಡಿದರು. ಪ್ರಾಚಾರ್ಯರಾದ ವಾಯ್. ಎಸ್. ಮತ್ತೂರ ಸ್ವಾಗತಿಸಿದರು. ಎನ್.ವಿ ಕಡಗದ ನಿರೂಪಿಸಿದರು. ಉಪನ್ಯಾಸಕರಾದ ಶ್ವೇತಾ ನಿಲುಗಲ್ ವಂದಿಸಿದರು.

> ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಾದ ಸಂತೋಷ ಕೊಟೆಣ್ಣವರ, ರಂಜಿತಾ ಸುಣಗಾರ, ಭೂಮಿಕಾ ಕಬಾಡರ, ಅಂಜಲಿ ಹಾವನೂರ, ಯಲ್ಲವ್ವ ಗಾಜಿ, ಪಲ್ಲವಿ ಮುಧೋಳ, ಅಮರಹುಸೇನ ಮುಲ್ಲಾ, ರಜೀಯಾಬೇಗಂ, ಯಲ್ಲಪ್ಪ ಬಡಪ್ಪನವರ, ಅಪ್ಸಾನಾ ಹಾಳಕೇರಿ ಅವರಿಗೆ ತೋಂಟದ ಸಿದ್ಧಲಿಂಗ ಶ್ರೀಗಳ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

## ಇಂದು BPHU ಲ್ಯಾಬ್‌ನ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜನಿಯರಿಂಗ್ ಘಟಕ, ತಾಲೂಕಾ ಆರೋಗ್ಯ ಅಧಿಕಾರಿಗಳು, ಮುಂಡರಗಿ ತಾಲೂಕು ಆಸ್ಪತ್ರೆ ಮುಂಡರಗಿ ಇವರ ಸಂಯುಕ್ತ ಆಶ್ರಯದಲ್ಲಿ ಜುಲೈ 22 ರಂದು ಬೆಳಿಗ್ಗೆ 11 ಗಂಟೆಗೆ ಶಿರಹಟ್ಟಿ ತಾಲೂಕು ಆಸ್ಪತ್ರೆಯ ( ನೂತನ ಜಾಗೆಯ ಆವರಣದಲ್ಲಿ )ಃಕಊಗ ಲ್ಯಾಬ್‌ನ ಉದ್ಘಾಟನೆ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮತ್ತು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್ , ಮುಂಡರಗಿ ಪುರಸಭೆ ಅಧ್ಯಕ್ಷರಾದ ಶ್ರೀಮತಿ ನಿರ್ಮಲಾ ನಾ ಕೋರ್ಲಳ್ಳಿ, ಮುಂಡರಗಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಡಿ.ಡಿ.ಮೋರನಾಳ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತ, ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತ ಶಿವಕುಮಾರ್ ಕೆ.ಬಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕ ಡಾ.ಅವಿನಾಶ ಮೆನನ್ ರಾಜೇಂದ್ರನ್, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕ ಡಾ.ವಸಂತ ಕುಮಾರ ಕೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನಿಯರಿಂಗ್ ಘಟಕದ ಮುಖ್ಯ ಅಭಿಯಂತರ ಮುಕ್ಕಣ್ಣ ನಾಯಕ, ಬೆಳಗಾವಿ ವಿಭಾಗದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ವಿಭಾಗೀಯ ಸಹ ನಿರ್ದೇಶಕ ಶ್ರೀಮತಿ ಡಾ. ಪುಷ್ಪಾ ಎಚ್. ಆರ್, ಆಗಮಿಸುವರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮುಂಡರಗಿ ತಾಲೂಕು ಆರೋಗ್ಯ ಅಧಿಕಾರಿ ಡಾ. ಲಕ್ಷ್ಮಣ ಪೂಜಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜಿನಿಯರಿಂಗ್ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರಾದ ಮಾಂತೇಶ ಕೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನೀಯರಿಂಗ್ ಉಪವಿಭಾಗ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮಲ್ಲಿಕಾರ್ಜುನ ಕೊಕಟನೂರ ಸ್ವಾಗತ ಕೋರಿದ್ದಾರೆ.

## ಮಾನವ ಹಕ್ಕುಗಳ ಪಾಲನೆಯಿಂದ ಸಾಮಾಜಿಕ ಕ್ರಾಂತಿ

▶▶ಮೊದಲನೇ ಪುಟದಿಂದ



ಹಕ್ಕುಗಳ ಉಲ್ಲಂಘನೆಗಳನ್ನು ತಡೆದು ಮೂಲಭೂತ ಹಕ್ಕುಗಳ ರಕ್ಷಣೆಯೇ ನ್ಯಾಯಾಲಯ ಉದ್ದೇಶವಾಗಿದೆ. ಕಾಲ ಕಾಲಕ್ಕೆ ಮಾನವ ಹಕ್ಕುಗಳು ಬದಲಾವಣೆಯಾಗಿವೆ.

ಆರ್ಥಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಹಕ್ಕುಗಳನ್ನು ನೀಡಲಾಗಿದೆ. ಅದರಂತೆ ಶೈಕ್ಷಣಿಕ ಹಕ್ಕು, ಜೀವಿಸುವ ಹಕ್ಕು, ಆರೋಗ್ಯದ ಹಕ್ಕುಗಳನ್ನು ನೀಡಲಾಗಿದೆ ಎಂದು ತಿಳಿಸಿದರು.ನಾಗರಿಕ ಸಮಾಜ ನಿರ್ಮಾಣದಲ್ಲಿ ಜನರ ಮೂಲಭೂತ ಹಕ್ಕುಗಳ ಮಹತ್ವ ಸಾರಬೇಕಿದೆ. ಮಾನವ ಹಕ್ಕುಗಳ ಪಾಲನೆಯಿಂದ ಸಾಮಾಜಿಕ ಕ್ರಾಂತಿಯಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಕಾನೂನು ಆಯೋಗದ ಸದಸ್ಯ ಎ.ಜೆ. ನಿಜಗಣ್ಣವರ, ಕಾನೂನು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸಿ. ಬಸವರಾಜ, ಕಾನೂನು ಮತ್ತು ಸಂಸದೀಯ ಸುಧಾರಣೆ ಸಂಸ್ಥೆ ನಿರ್ದೇಶಕ ಸಿ.ಎಸ್. ಪಾಟೀಲ, ಕಾನೂನು ಆಯೋಗದ ಸದಸ್ಯ ಕಾರ್ಯದರ್ಶಿ ಧರ್ಮಗೌಡರ, ಬೆಂಗಳೂರು ಕಾನೂನು ಕಾಲೇಜಿನ ಪ್ರಾಂಶುಪಾಲ ಪ್ರೊ. ಎನ್.ದಶರಥ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿವಿ ಕುಲಸಚಿವ ಡಾ. ಎಸ್.ವಿ. ನಾಡಗೌಡರ, ವಿತ್ತಾಧಿಕಾರಿ ಪ್ರಶಾಂತ ಜೆ.ಸಿ ಉಪಸ್ಥಿತರಿದ್ದರು.

## ಕಳಸಾ-ಬಂಡೂರಿ ಯೋಜನೆಗೆ ಕೇಂದ್ರದಿಂದ ಅನ್ಯಾಯ

▶▶ಮೊದಲನೇ ಪುಟದಿಂದ

ಸೇನೆ ರಾಜ್ಯಾಧ್ಯಕ್ಷ ಎಚ್.ಆರ್. ಬಸವರಾಜಪ್ಪ ಮಾತನಾಡಿದರು. ಹುತಾತ್ಮ ರೈತರ ಸ್ಮಾರಕ ನಿರ್ಮಾಣಕ್ಕೆ ಭೂದಾನ ಮಾಡಿರುವ ದೇಸಾಯಿಗೌಡ ಪಾಟೀಲ, ಸಲೀಂಸಾಬ ಮೇಗಲಮನಿ ಅವರನ್ನು ಸಚಿವರು ಸನ್ಮಾನಿಸಿದರು.


ಡಾ. ಸಂಗಮೇಶ ಕೊಳ್ಳಿಯವರ, ರಾಜುಗೌಡ ಕೆಂಚನಗೌಡ್ರ, ಉಮೇಶಗೌಡ ಪಾಟೀಲ, ರಾಜು ಕಲಾಲ, ವಿವೇಕ ಯಾವಗಲ್, ಬಸವರಾಜ ಸಾಬಳೆ, ಶಂಕರಪ್ಪ ಅಂಬಲಿ, ಚನ್ನು ನಂದಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಉಪ ವಿಭಾಗಾಧಿಕಾರಿ ಎಂ.ಗಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಗದೀಶ ರೋಹನ್, ತಹಸೀಲ್ದಾರ ಶ್ರೀಶೈಲ ತಳವಾರ, ದಶರಥ ಗಾಣಿಗೇರ, ಬಿ.ಎಸ್. ಉಪ್ಪಾರ, ವಿಠ್ಠಲ ಜಾಧವ ಸೇರಿದಂತೆ ರೈತರು ಹಾಗೂ ಮುಖಂಡರು ಉಪಸ್ಥಿತರಿದ್ದರು.



ಗದಗ ಜಿಲ್ಲಾ ಶ್ರೀ ಸಮಗಾರ ಹರಳಯ್ಯ ಸಮಾಜದ ನೂತನ ಅಧ್ಯಕ್ಷರನ್ನಾಗಿ ಲಕ್ಷ್ಮೇಶ್ವರದ ಅನಿಲ ನಾಗಪ್ಪ ಮುಳಗುಂದ ಅವರನ್ನು ಆಯ್ಕೆ ಮಾಡಲಾಯಿತು. ಭಾನುವಾರ ಗದಗನಲ್ಲಿ ನಡೆದ ರಾಜ್ಯ ಪದಾಧಿಕಾರಿಗಳನ್ನೊಳಗೊಂಡ ಸಮಾಜದ ಕಾಯಕ್ರಮದಲ್ಲಿ ರಾಜ್ಯ ಗೌರವಾಧ್ಯಕ್ಷ ಯಲ್ಲಪ್ಪ ಬೆಂಡಿಗೇರಿ, ರಾಜ್ಯ ಉಪಾಧ್ಯಕ್ಷ ಪರಶುರಾಮ ಅರಿಕೇರಿ, ಪ್ರ.ಕಾರ್ಯದರ್ಶಿ ಸುನೀಲ ಮದನಬಾವಿ, ಮಂಜುನಾಥ ಹಂಜಗಿ ಸೇರಿ ವಿವಿಧ ತಾಲೂಕಿನ ಅಧ್ಯಕ್ಷರು, ಸಮಾಜದ ಮುಖಂಡರು ಇದ್ದರು.

## ಸಚಿವ ಡಾ.ಎಚ್.ಕೆ. ಪಾಟೀಲ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಜುಲೈ 22 ರ ಜಿಲ್ಲಾ ಪ್ರವಾಸದ ವಿವರ ಹೀಗಿದೆ.

ಜುಲೈ 22 ರಂದು ಬೆಳಿಗ್ಗೆ 9:15 ಗಂಟೆಗೆ ರಸ್ತೆ ಮೂಲಕ ಲಕ್ಕುಂಡಿಗೆ ತೆರಳಿ ಕ್ಯಾಸ್ಕೇಡ್ ಪ್ಯಾಕ್ ಮಾಡಿದ ಕುಡಿಯುವ ನೀರಿನ ಘಟಕ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ನಂತರ ಇನಾಮ್ ವೆಂಕಟಾಪುರದಲ್ಲಿ ಬೆಳಗ್ಗೆ 10 ಗಂಟೆಗೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಭೂಮಿ ಪೂಜೆ ನೆರವೇರಿಸುವರು.

ತದನಂತರ ಬೆಳಿಗ್ಗೆ 11 ಗಂಟೆಗೆ ಶಿರಹಟ್ಟಿಗೆ ತೆರಳಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವರೊಂದಿಗೆ ಶಿರಹಟ್ಟಿಯಲ್ಲಿ ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳ ಶಿಲಾನ್ಯಾಸ ಹಾಗು ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಸಂಜೆ 5:30 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಗದಗ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ಕೈಗೊಂಡು ಹುಬ್ಬಳ್ಳಿಗೆ ತೆರಳಿ ಅಲ್ಲಿಂದ ರಾತ್ರಿ 10.30 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳಸುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಭಯಪಡದೇ ಎಚ್‌ಪಿವಿ ಲಸಿಕೆ ಪಡೆಯಿರಿ

▶▶ಮೊದಲನೇ ಪುಟದಿಂದ

ಜಿಲ್ಲಾ ಮತ್ತು ತಾಲೂಕಾ ವೈದ್ಯರುಗಳು ಎಲ್ಲ ಶಾಲೆಗಳಿಗೆ ಭೇಟಿ ನೀಡಿ ಎಚ್‌ಪಿವಿ ಲಸಿಕೆಯಿಂದ ಆಗುವ ಪ್ರಯೋಜನಗಳ ಬಗ್ಗೆ ವಿದ್ಯಾರ್ಥಿನಿಯರಿಗೆ ತಿಳಿಸಿ, ನಂತರ ಲಸಿಕೆ ನೀಡುವ ಕಾರ್ಯ ಮಾಡುತ್ತಾರೆ. ಮುಖ್ಯವಾಗಿ ಈ ಲಸಿಕೆ ಪಡೆಯುವುದರಿಂದ ಹೆಣ್ಣುಮಕ್ಕಳಿಗೆ ತಗಲುವ ಬಹುತೇಕ ರೋಗಗಳನ್ನು ತಡೆಗಟ್ಟಬಹುದು. ಮಹಿಳೆಯರ ಆರೋಗ್ಯ ಸ್ಥಿರತೆಯನ್ನು ಕಾಪಾಡುವಲ್ಲಿ ಲಸಿಕೆ ಸಹಕಾರಿಯಾಗಿದ್ದು, 15 ವರ್ಷ ಮೇಲ್ಪಟ್ಟ ಮಹಿಳೆಯರಿಗೆ ಹೆಚ್ಚಿನ ಡೋಸೇಜ್ ನೀಡಬೇಕಾಗುತ್ತದೆ ಎಂದು ವಿವರಿಸಿದರು.

ಈ ಲಸಿಕಾ ಅಭಿಯಾನ ರಾಜ್ಯದಲ್ಲಿ ಪ್ರಥಮ ಬಾರಿಗೆ ರೋಣ ತಾಲೂಕಿನಲ್ಲಿ ಜುಲೈ 30ರಂದು ಆರಂಭವಾಗಲಿದೆ. ಶಿಕ್ಷಣ ಇಲಾಖೆಯ ಪ್ರಕಾರ ಒಟ್ಟು 9 ಸಾವಿರ ವಿದ್ಯಾರ್ಥಿನಿಯರಿಗೆ ಈ ಯೋಜನೆಯ ಲಾಭ ಸಿಗಲಿದೆ. ಮೊದಲಬಾರಿಗೆ 500 ವಿದ್ಯಾರ್ಥಿನಿಯರಿಗೆ ಲಸಿಕೆ ನೀಡಲಾಗುತ್ತಿದ್ದು, ನಂತರ ಪ್ರತಿ ಗ್ರಾಮಗಳಿಗೆ ತೆರಳಿ ಲಸಿಕೆಯನ್ನು ನೀಡಲಾಗುವುದು. ಸಾಮಾನ್ಯವಾಗಿ ಯಾವುದೇ ತರಹದ ಲಸಿಕೆಯನ್ನು ನೀಡಿದಾಗ ಆಗುವ ಲಕ್ಷಣಗಳ ಹೊರತಾಗಿ ಬೇರೆ ಯಾವುದೇ ರಿತಿಯ ಅಡ್ಡ ಪರಿಣಾಮಗಳಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಐ.ಎಸ್. ಪಾಟೀಲ, ವೀರಣ್ಣ ಶೆಟ್ಟರ, ಬಸವರಾಜ ನವಲಗುಂದ, ಡಾ. ಶಕೀಲ್ ಅಹ್ಮದ ಕುಂದರಗಿ, ಡಾ. ಬಿ.ಎಸ್. ಭಜಂತ್ರಿ, ಡಾ. ಐ.ಬಿ. ಕೊಟ್ಟೂರಶೆಟ್ಟಿ, ಬಿಇಒ ಅಂದಪ್ಪ, ಅಕ್ಷರದಾಸೋಹಾಧಿಕಾರಿ ಕೆ.ಎಲ್. ನಾಯಕ, ಆರೋಗ್ಯ ಶಿಕ್ಷಣಾಧಿಕಾರಿ ಕೆ.ಹಾದಿಮನಿ ಮುಂತಾದವರು ಉಪಸ್ಥಿತರಿದ್ದರು.

## DCM ಡಿಕೆ ಶಿವಕುಮಾರ್ ಆರೋಗ್ಯದಲ್ಲಿ ಏರುಪೇರು

### 3 ದಿನ ಸಾರ್ವಜನಿಕರ ಭೇಟಿಗೆ ಇಲ್ಲ ಅವಕಾಶ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

DCM ಡಿಕೆ ಶಿವಕುಮಾರ್‌ಗೆ ಅನಾರೋಗ್ಯ ಉಂಟಾಗಿ 3 ದಿನ ಸಾರ್ವಜನಿಕರ ಭೇಟಿಗೆ ಅವಕಾಶವಿಲ್ಲ ಎನ್ನಲಾಗಿದೆ. ಈ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿರುವ ಡಿಕೆಶಿ, ಮಂಗಳವಾರದಿಂದ ಮೂರು ದಿನಗಳ ಕಾಲ ಯಾರನ್ನೂ ಭೇಟಿ ಆಗಲು ಸಾಧ್ಯವಾಗುತ್ತಿಲ್ಲ. ಸಾರ್ವಜನಿಕರು, ಪಕ್ಷದ ಮುಖಂಡರು, ಕಾರ್ಯಕರ್ತರು ಸೇರಿದಂತೆ ಯಾರನ್ನೂ ಭೇಟಿ ಆಗಲು ಸಾಧ್ಯವಾಗುವುದಿಲ್ಲ. ಇದಕ್ಕಾಗಿ ವಿಷಾದಿಸುತ್ತೇನೆ. ಯಾರೂ ತಪ್ಪು ತಿಳಿಯಬಾರದು ಎಂದು ಬರೆದುಕೊಂಡಿದ್ದಾರೆ.

ಡಿಕೆ ಶಿವಕುಮಾರ್ ಅವರು ತಮ್ಮ ಅನಾರೋಗ್ಯದ ಬಗ್ಗೆ ಅಧಿಕೃತವಾಗಿ ಹೇಳಿಕೊಂಡಿಲ್ಲ. ಆದ್ರೆ, ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ ಅವರು ಡಿಕೆ ಶಿವಕುಮಾರ್ ಗೆ ಕರೆ ಮಾಡಿ ಆರೋಗ್ಯ ವಿಚಾರಿಸಿದ್ದು, ಈ ಬಗ್ಗೆ ಸುರ್ಜೆವಾಲ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

## ಬಾವಾಸಾಬರ ಜನಪರ ಕಾಳಜಿ ಸ್ವಾಗತಾರ್ಹ

■ವಿಜಯಸಾಕ್ಷಿ ಸುದ್ದಿ, ರೋಣ



ಪಟ್ಟಣ ಸೇರಿದಂತೆ ಗ್ರಾಮೀಣ ಭಾಗಗಳ ಬಡವರ ಆರೋಗ್ಯದ ಬಗ್ಗೆ ಬಾವಾಸಾಬ ಬೆಟಗೇರಿ ಅಭಿಮಾನಿ ಬಳಗದವರು ಹೊಂದಿರುವ ಕಾಳಜಿ ಸ್ವಾಗತಾರ್ಹ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಅಂಜುಮನ್ ಸಂಸ್ಥೆಯ ಅಧ್ಯಕ್ಷ ಬಾವಾಸಾಬ ಬೆಟಗೇರಿ ಅಭಿಮಾನಿ ಬಳಗದಿಂದ ಅಂಜುಮನ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ, ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿದರು.

ರೋಣ ಅಂಜುಮನ್ ಸಂಸ್ಥೆಯ ಅಧ್ಯಕ್ಷ ಬಾವಾಸಾಬ ಬೆಟಗೇರಿಯವರು ತಮ್ಮ ಆಡಳಿತದ ಅವಧಿಯಲ್ಲಿ ಜನ ಮೆಚ್ಚುವಂತೆ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತಾ ಬಂದಿದ್ದಾರೆ. ಬೀದಿ ಬದಿ ವ್ಯಾಪಾರಿಗಳಿಗೆ ಮತ್ತು ಶಾಲಾ ಮಕ್ಕಳಿಗೆ ಛತ್ರಿಗಳನ್ನು ವಿತರಿಸಿ ನೆರವಾಗಿದ್ದಾರೆ. ಇಂದು ಬಡವರ ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ಮೂಲಕ ಅವರಿಗೆ ಉಚಿತ ತಪಾಸಣೆ ಹಮ್ಮಿಕೊಂಡಿದ್ದು ಶ್ಲಾಘನೀಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಾವಾಸಾಬ ಬೆಟಗೇರಿ ವಹಿಸಿದ್ದರು. ಗುರುಪಾದ ಶ್ರೀಗಳು ಸಾನ್ನಿಧ್ಯ, ಹಜರತ ಸುಲೇಮಾನ ದರ್ಗಾದ ಅಜ್ಜನವರು ನೇತೃತ್ವ ವಹಿಸಿದ್ದರು.

ಪುರಸಭೆ ಅಧ್ಯಕ್ಷೆ ಬಸಮ್ಮ ಕೊಪ್ಪದ, ಉಪಾಧ್ಯಕ್ಷ ಹನ್ಮಂತಪ್ಪ ತಳ್ಳಿಕೇರಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಎಚ್.ಎಸ್. ಸೋಂಪುರ, ಯುಸೂಫ್ ಇಟಗಿ, ವಿ.ಬಿ. ಸೋಮನಕಟ್ಟಿಮಠ, ಗದಿಗೆಪ್ಪ ಕಿರೇಸೂರ, ದುರ್ಗಪ್ಪ ಹಿರೇಮನಿ, ಸಂಗಪ್ಪ ಜಿಡ್ಡಿಬಾಗಿಲ, ಈಶ್ವರ ಕಡಬಿನಕಟ್ಟಿ, ದಾವಲಸಾಬ ಬಾಡಿನ ಮುಂತಾದವರು ಉಪಸ್ಥಿತರಿದ್ದರು.

# ಆಕ್ಷೇಪಣೆಗೆ ಜುಲೈ 28 ಕೊನೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯದ ಲ್ಯಾಬ್ ಅಸಿಸ್ಟೆಂಟ್ ಕಂ ಡಿಈಓ ಹುದ್ದೆಗೆ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಹುದ್ದೆಗೆ ಅಪ್‌ಲೋಡ್ ಆಗಿರುವ ಅರ್ಜಿಗಳಿಗೆ ರೋಷ್ಟರ್ ಕಂ.ಮೆರಿಟ್ ಅಳವಡಿಸಿ 01 ಲ್ಯಾಬ್ ಅಸಿಸ್ಟೆಂಟ್ ಕಂ. ಡಿಈಓ ಹುದ್ದೆಗೆ ರೋಷ್ಟರ್ ಸಂ.1 ರಲ್ಲಿ 1:7 ಪಟ್ಟಿ ತಯಾರಿಸಿದೆ. ಸದರಿ ಅಭ್ಯರ್ಥಿಗಳಿಗೆ ದಿನಾಂಕ:15.07.2025 ರಿಂದ 17.07.2025ರ ಸಂಜೆ 04.00 ವರೆಗೆ ಮೂಲದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಲ್ಯಾಬ್ ಅಸಿಸ್ಟೆಂಟ್ ಕಂ. ಡಿಈಓ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಯಾವುದಾದರೂ ಆಕ್ಷೇಪಣೆ ಇದ್ದಲ್ಲಿ ರಜಾ ದಿನಗಳನ್ನು ಹೊರತುಪಡಿಸಿ ಜುಲೈ 22 ರಿಂದ 28 ರವರೆಗೆ ಕಚೇರಿ ಸಮಯದಲ್ಲಿ ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ, ಗದಗ ಇಲ್ಲಿ ಲಿಖಿತ ರೂಪದಲ್ಲಿ ನೀಡಲು ಸೂಚಿಸಿದೆ. ಲ್ಯಾಬ್ ಅಸಿಸ್ಟೆಂಟ್ ಕಂ.

ಡಿಈಓ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು gadag.nic.in ವೆಬ್‌ಸೈಟ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಆಯ್ಕೆ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 45ನೇ ರೈತ ಹುತಾತ್ಮ ದಿನಾಚರಣೆಯ ಬಹಿರಂಗ ಸಭೆಯಲ್ಲಿ ಆಳಂದ ಶಾಸಕ ಬಿ.ಆರ್. ಪಾಟೀಲ ಅಸಮಾಧಾನ

# ಎಲ್ಲ ಸರ್ಕಾರಗಳಿಂದಲೂ ರೈತರಿಗೆ ಅನ್ಯಾಯ



■ವಿಜಯಸಾಕ್ಷಿ ಸುದ್ದಿ, ನರಗುಂದ

ಸಾವಿರಾರು ಕೋಟಿ ರೂಪಾಯಿ ಖರ್ಚು ಮಾಡಿ ಚುನಾವಣೆ ಗೆಲ್ಲುವ ಪರಿಸ್ಥಿತಿ ರಾಜ್ಯ, ದೇಶದೆಲ್ಲೆಡೆ ನಿರ್ಮಾಣವಾಗಿದೆ. ಪರಿಣಾಮ ಇಂದಿನ ಯಾವುದೇ ಸರ್ಕಾರಗಳು ರೈತರು, ಕೂಲಿ ಕಾರ್ಮಿಕರು, ಜನಸಾಮಾನ್ಯರ ಪರವಾಗಿರದೆ ಕಾರ್ಪೋರೇಟ್ ಕಂಪನಿಗಳ ಪರವಾಗಿ ಕೆಲಸ ಮಾಡುವಂತಾಗಿದೆ ಎಂದು ಆಳಂದ ಶಾಸಕ ಬಿ.ಆರ್. ಪಾಟೀಲ ಅಸಮಾಧಾನ ವ್ಯಕ್ತಪಡಿಸಿದರು.

ಮಲಪ್ರಭಾ ಅಚ್ಚುಕಟ್ಟು ಸಮನ್ವಯ ಸಮಿತಿಯಿಂದ ಪಟ್ಟಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ 45ನೇ ರೈತ ಹುತಾತ್ಮ ದಿನಾಚರಣೆಯ ಬಹಿರಂಗ ಸಭೆಯಲ್ಲಿ ಅವರು ಮಾತನಾಡಿದರು.

ಸಾಲದ ಸುಳಿಗೆ ಸಿಲುಕಿರುವ 5 ಲಕ್ಷ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ದೆಹಲಿ ಗಡಿಯಲ್ಲಿ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಪ್ರತಿಭಟನೆ ನಡೆಸಿರುವ 700ಕ್ಕೂ ಅಧಿಕ ರೈತರು ಸಾವನ್ನಪ್ಪಿದ್ದಾರೆ. ಈ ಕುರಿತು ಯಾವುದೇ ಸರ್ಕಾರಗಳು ಶ್ರದ್ಧಾಂಜಲಿ ಸಲ್ಲಿಸಿ ಅಧಿವೇಶನದಲ್ಲಿ ಚರ್ಚೆ ನಡೆಸದಿರುವುದು ಅತ್ಯಂತ ನೋವಿನ ಸಂಗತಿ. ನಮ್ಮ ದೇಶವನ್ನು ಮೋದಿ, ಅಮಿತ್‌ಷಾ, ಅಂಬಾನಿ, ಅದಾನಿ ಸೇರಿ ಕೇವಲ ನಾಲ್ಕು ಜನರು ನಡೆಸುತ್ತಿದ್ದಾರೆ. ಜಾತಿ, ಧರ್ಮಕ್ಕಿಂತ ನಮಗೆ ಅಗತ್ಯ ಸೌಲಭ್ಯಗಳು ಬೇಕು. ಉತ್ತರ ಕರ್ನಾಟಕದಲ್ಲಿ ಕೈಗಾರಿಕೆಗಳ ಸ್ಥಾಪನೆಯಾಗಬೇಕು. ರೈತರ ಬೆಳೆಗಳನ್ನು ಕನಿಷ್ಠ ಬೆಂಬಲಬೆಲೆ ಯೋಜನೆಯಡಿ ಕಡ್ಡಾಯವಾಗಿ ಖರೀಸುವಂತಾಗಬೇಕು. ಪ್ರತಿ ಕ್ವಿಂಟಲ್ ತೊಗರಿಗೆ 10ರಿಂದ 12 ಸಾವಿರ ರೂಪಾಯಿ ಬೆಂಬಲಬೆಲೆ ನೀಡಬೇಕು. ರೈತರ ಸಾಲಮನ್ನಾ ಮಾಡಬೇಕು. ಯೋಗ್ಯ ಬೆಲೆ ನೀಡಿದರೆ ನಮ್ಮ ರೈತರು ಎಣ್ಣೆಕಾಳು ಬೆಳೆದು ಕೊಡುತ್ತಾರೆ. ಆದರೆ, ಅವರಿಗೆ ಅಧಿಕಾರಕ್ಕೆ ಬರುವ ಎಲ್ಲ ಸರ್ಕಾರಗಳಿಂದ ಅನ್ಯಾಯವಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ಬಿ.ಆರ್. ಯಾವಗಲ್ ಮಾತನಾಡಿ, ನರಗುಂದ-ನವಲಗುಂದ ಶಾಶ್ವತ ಬಂಡಾಯದ ನಾಡು ಎಂದು ಗುರುತಿಸಿಕೊಂಡಿವೆ. ಇಲ್ಲಿನ ರೈತರು ನಡೆಸಿದ ಹೋರಾಟಕ್ಕೆ ದೊಡ್ಡ ಇತಿಹಾಸವಿದೆ. ರೈತ ಬಂಡಾಯದಲ್ಲಿ 136 ಅಮಾಯಕ ರೈತರನ್ನು ಬಂಧಿಸಿ 20 ಜನರಿಗೆ ಗಲ್ಲು ಶಿಕ್ಷೆ ವಿಧಿಸಲಾಗಿತ್ತು. ಸಂಘಟನಾತ್ಮಕ ಹೋರಾಟದ ಫಲವಾಗಿ ಎಲ್ಲರನ್ನು ಶಿಕ್ಷೆಯಿಂದ ಪಾರು ಮಾಡಿದ್ದೇವೆ. ನಾನು 5 ಬಾರಿ ಶಾಸಕನಾಗಿ ಆಯ್ಕೆಯಾದರೂ ಹುತಾತ್ಮ ರೈತರ ಸ್ಮಾರಕ ನಿರ್ಮಿಸಲು ಸಾಧ್ಯವಾಗಿರಲಿಲ್ಲ. ಈಗ ಈಡೇರಿದ್ದು ಹೆಮ್ಮೆಯಕರ ಸಂಗತಿ. ಆದರೆ, ಇಂದಿನ ದಿನಗಳಲ್ಲಿ ರಾಜಕೀಯ ಕಲುಷಿತಗೊಂಡಿದೆ. ನಿಯತ್ತು, ನ್ಯಾಯ ಇಲ್ಲದ್ದಕ್ಕೆ ಚುನಾವಣೆಯಲ್ಲಿ ಕೋಟ್ಯಾಂತರ ರೂಪಾಯಿ ಖರ್ಚು ಮಾಡುವ ಪರಿಸ್ಥಿತಿ ರಾಜಕಾರಣಿಗಳಿಗೆ ಬಂದೊದಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಪ್ಪಾಸಾಹೇಬ ಪಾಟೀಲ, ವಿವೇಕ ಯಾವಗಲ್, ರಾಜು ಕಲಾಲ ಮಾತನಾಡಿದರು. ಅಪ್ಪಣಗೌಡ ನಾಯ್ಕರ, ಮಲ್ಲಣ್ಣ ಕೊಳ್ಳೇರಿ, ಪ್ರವೀಣ ಯಾವಗಲ್ಲ, ದ್ಯಾಮಣ್ಣ ಕಾಡಪ್ಪನವರ, ಆರ್.ಎನ್. ಪಾಟೀಲ, ದ್ಯಾಮಣ್ಣ ಸವದತ್ತಿ, ಗುರುಪಾದಪ್ಪ ಕುರಹಟ್ಟಿ, ಶ್ರೀಕಾಂತಗೌಡ ಪಾಟೀಲ, ಅಪ್ಪಾಜಿ ವಿಜಾಪೂರ, ಬಾಬು ಹಿರೇಹೊಳಿ, ಪ್ರಕಾಶ ಹಡಗಲಿ, ಬಿ.ಐ.ಕಡಕೋಳ ಮುಂತಾದವರಿದ್ದರು.

ನವಲಗುಂದ ಶಾಸಕ ಎನ್.ಎಚ್. ಕೋನರೆಡ್ಡಿ ಮಾತನಾಡಿ, ಕುಡಿಯುವ ನೀರಿನ ಕಳಸಾ-ಬಂಡೂರಿ ಯೋಜನೆ ಅನುಷ್ಠಾನಗೊಳ್ಳದಿದ್ದರೂ ಬಿಜೆಪಿಯವರು ಸಿಹಿ ಹಂಚಿ, ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಿದರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿಯವರು ದಿ. ಅನಂತಕುಮಾರ ಅವರಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಡುವಿನ ಪ್ರಮುಖ ಕೊಂಡಿಯಾಗಿ ಕಳಸಾ-ಬಂಡೂರಿ ಯೋಜನೆಗೆ ಶ್ರಮಿಸಬೇಕು ಎಂದು ಆಗ್ರಹಿಸಿದರು.

# ಸಮರ್ಪಕ ಗೊಬ್ಬರ ವಿತರಣೆಗೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸೋಮವಾರ ಶಿರಹಟ್ಟಿಯಲ್ಲಿ ತಾಲೂಕಾ ಜಾತ್ಯಾತೀತ ಜನತಾದಳದ ವತಿಯಿಂದ ರೈತರಿಗೆ ಯೂರಿಯಾ ಗೊಬರ ಸಮರ್ಪಕ ವಿತರಣೆಯಾಗುವಂತೆ ವ್ಯವಸ್ಥೆಯನ್ನು ಕಲ್ಪಿಸಬೇಕೆಂದು ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜೆಡಿಎಸ್‌ನ ಶಿರಹಟ್ಟಿ ನಗರ ಘಟಕದ ಅಧ್ಯಕ್ಷ ರಾಯಸಾಬ ಥಾಲಾಯತ, ಶಿರಹಟ್ಟಿ ತಾಲೂಕಿನ ರೈತರಿಗೆ ಯೂರಿಯಾ ಗೊಬ್ಬರ ಸರಿಯಾಗಿ ವಿತರಣೆ ಆಗುತ್ತಿಲ್ಲ. ಸಂಬಂಧಿಸಿದ ಇಲಾಖೆ, ಸಂಸ್ಥೆಗಳು ಸರಿಯಾಗಿ ವಿತರಣೆ ಮಾಡದೇ ಇರುವುದರಿಂದ ರೈತರಿಗೆ ತೊಂದರೆಯಾಗುತ್ತಿದ್ದು, ಈ ಕೂಡಲೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿ ರೈತರಿಗೆ ಸಮರ್ಪಕ ಗೊಬ್ಬರ ವಿತರಣೆಯಾಗುವಂತೆ ಅನುಕೂಲ ಮಾಡಿಕೊಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿನಾಯಕ ಪರಬತ, ಮಲ್ಲೇಶ ವರವಿ, ಮಾಬುಸಾಬ ಕನಕವಾಡ, ಸುರೇಶ ಲಮಾಣಿ, ಆನಂದ ಸೊರಟೂರ, ಪಕ್ಕಣ್ಣ ತುಳಿ, ಬಸು ಕಲ್ಲಪ್ಪನವರ, ಲಲಿತಾ ಕಲ್ಲಪ್ಪನವರ, ಶರಣಪ್ಪ ಹೂಗಾರ, ವೀರೇಶ ಬಣಗಾರ, ಹನುಮಂತ ಕುರಿ, ಸಿದ್ದಪ್ಪ ತುಳಿ ಉಪಸ್ಥಿತರಿದ್ದರು.

# ತಾಲೂಕು ಆಸ್ಪತ್ರೆ ನೂತನ ಕಟ್ಟಡದ ಅಡಿಗಲ್ಲು ಸಮಾರಂಭ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜನಿಯರಿಂಗ್ ಘಟಕ, ತಾಲೂಕಾ ಆರೋಗ್ಯ ಅಧಿಕಾರಿಗಳು, ಶಿರಹಟ್ಟಿ ಇವರ ಸಂಯುಕ್ತ ಆಶ್ರಯದಲ್ಲಿ ಶಿರಹಟ್ಟಿ ತಾಲೂಕು ಆಸ್ಪತ್ರೆಯ ( ನೂತನ ಜಾಗೆಯ ಆವರಣದಲ್ಲಿ ) ನೂತನ ಕಟ್ಟಡದ ಅಡಿಗಲ್ಲು ಸಮಾರಂಭವನ್ನು ಜುಲೈ 22 ರಂದು ಬೆಳಿಗ್ಗೆ 11 ಗಂಟೆಗೆ ಶಿರಹಟ್ಟಿ ತಾಲೂಕು ಆಸ್ಪತ್ರೆಯ ( ನೂತನ ಜಾಗೆಯ ಆವರಣದಲ್ಲಿ ) ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮತ್ತು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಿರಹಟ್ಟಿ ಪಟ್ಟಣ ಪಂಚಾಯತ್ ಅಧ್ಯಕ್ಷೆ ಶ್ರೀಮತಿ ದೇವಕ್ಕ ಗುಡಿಮನಿ, ಶಿರಹಟ್ಟಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ವೀರಯ್ಯ ಮಠಪತಿ ಆಗಮಿಸುವರು. ವಿಶೇಷ ಆಹ್ವಾನಿತರಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ, ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತ ಶಿವಕುಮಾರ್ ಕೆ.ಬಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕ ಡಾ.ಅವಿನಾಶ ಮೆನನ್ ರಾಜೇಂದ್ರನ್ , ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕ ಡಾ.ವಸಂತ ಕುಮಾರ ಕೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನಿಯರಿಂಗ ಘಟಕದ ಮುಖ್ಯ ಅಭಿಯಂತರ ಮುಕ್ಕಣ್ಣ ನಾಯಕ, ಬೆಳಗಾವಿ ವಿಭಾಗದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ವಿಭಾಗೀಯ ಸಹ ನಿರ್ದೇಶಕಿ ಶ್ರೀಮತಿ ಡಾ. ಪುಷ್ಪಾ ಎಚ್.ಆರ್, ಆಗಮಿಸುವರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಶಿರಹಟ್ಟಿ ತಾಲೂಕು ಆರೋಗ್ಯ ಅಧಿಕಾರಿ ಡಾ.ಸುಭಾಷ್ ಎಸ್ ದೈಗೊಂಡ , ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನಿಯರಿಂಗ್ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರಾದ ಮಾಂತೇಶ ಕೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನಿಯರಿಂಗ್ ಉಪವಿಭಾಗ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮಲ್ಲಿಕಾರ್ಜುನ ಕೊಕಟನೂರ, ಶಿರಹಟ್ಟಿ ತಾಲೂಕು ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿಗಳಾದ ಡಾ. ಜಿ.ಪಿ.ಗೋಪಾಲರಾಜ್ , ದಾವಣಗೆರೆಯ ಕ್ಲಾಸ್ -1 ಗುತ್ತಿಗೆದಾರ ಸುರೇಶ ನೆಕ್ಕಂಟಿ ಸ್ವಾಗತ ಕೋರಿದ್ದಾರೆ. ಇದೇ ಸಂದರ್ಭದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜನಿಯರಿಂಗ್ ಘಟಕ, ತಾಲೂಕಾ ಆರೋಗ್ಯ ಅಧಿಕಾರಿಗಳು, ಶಿರಹಟ್ಟಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಲೆ ಹೊಸೂರು ಇವರ ಸಂಯುಕ್ತ ಆಶ್ರಯದಲ್ಲಿ ವೈದ್ಯಾಧಿಕಾರಿಗಳ ಹಾಗೂ ಸಿಬ್ಬಂದಿಗಳ ವಸತಿ ಗೃಹ ಉದ್ಘಾಟನೆ ನಡೆಯಲಿದೆ.

# ಕೃಷಿಯನ್ನು ಉದ್ಯಮದಂತೆ ಪ್ರೋತ್ಸಾಹಿಸಬೇಕಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಗೋವನಾಳದಲ್ಲಿ ಸೋಮವಾರ ರೈತ ಹುತಾತ್ಮ ದಿನಾಚರಣೆಯ ಅಂಗವಾಗಿ ಗ್ರಾಮದಲ್ಲಿನ ರೈತಪರ ಹೋರಾಟಗಾರರು ಹಾಗೂ ಹುತಾತ್ಮರಾದ ರೈತರ ಭಾವಚಿತ್ರ(ವೀರಗಲ್ಲು)ಕ್ಕೆ ಪೂಜೆ, ಶ್ರದ್ಧಾಂಜಲಿ ಸಲ್ಲಿಸಿದರು.



ಸುಮಾರು 32 (1993) ವರ್ಷಗಳ ಹಿಂದೆ ಗ್ರಾಮದ ರೈತರಾದ ಫಕ್ಕೀರಗೌಡ ಮಣಕಟ್ಟಿ, ರಾಮಣ್ಣ ಹುಬ್ಬಳ್ಳಿ, ಉಡಚಪ್ಪ ವಾಲಿಕಾರ ಈ ಮೂವರು ರೈತರು ಬೆಂಗಳೂರಿನಲ್ಲಿ ಜರುಗಿದ ಅಂತಾರಾಷ್ಟ್ರೀಯ ರೈತ ಸಮಾವೇಶದಲ್ಲಿ ಪಾಲ್ಗೊಳ್ಳಲು ಹೋದಾಗ ಜರುಗಿದ ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ್ದರು. ಅವರ ಸ್ಮರಣಾರ್ಥವಾಗಿ ಗ್ರಾಮಸ್ಥರು ಗ್ರಾಮದ ಅಗಸಿಯಲ್ಲಿ ವೀರಗಲ್ಲು ಸ್ಥಾಪಿಸಿ ಪ್ರತಿವರ್ಷ ರೈತ ಹುತಾತ್ಮ ದಿನಾಚರಣೆಯಂದು ಸ್ಮರಿಸುವ ಕಾರ್ಯ ನೆರವೇರಿಸಲಾಗುತ್ತಿದೆ.

ಈ ವೇಳೆ ಮಾತನಾಡಿದ ಹಿರಿಯ ಮುಖಂಡ, ಗ್ರಾ.ಪಂ ಮಾಜಿ ಸದಸ್ಯ ಶೇಖರಗೌಡ ಕೊರಡೂರ, ರೈತರು, ಶಿಕ್ಷಕರು ಮತ್ತು ಸೈನಿಕರು ದೇಶದ ಬೆನ್ನೆಲುಬಾಗಿದ್ದು, ಅವರನ್ನು ಗೌರವ ಭಾವನೆಯಿಂದ ಕಾಣುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಇವರುಗಳು ಸೇವಾ ಕಾರ್ಯ ಸದಾ ಸ್ಮರಣೀಯ. ರೈತರಿಗೆ ದೊರೆಯಬೇಕಾದ ಸೌಲಭ್ಯಗಳು ಇನ್ನೂ ದೊರೆಯದಿರುವುದು ವಿಷಾದದ ಸಂಗತಿಯಾಗಿದೆ. ಅನ್ನ ನೀಡುವ ರೈತರ ಉತ್ಪನ್ನಗಳಿಗೆ ದರ ನಿಗದಿಪಡಿಸುವ ಅಧಿಕಾರ ರೈತರಿಗಿಲ್ಲ ಮತ್ತು ಅವರು ಬೆಳೆದ ಆಹಾರ ಉತ್ಪನ್ನಗಳಿಗೆ ಕಿಮ್ಮತ್ತೂ ಇಲ್ಲದಿರುವುದು ಖೇದಕರ. ಈ ನಿಟ್ಟಿನಲ್ಲಿ ಸರ್ಕಾರಗಳು ಕೃಷಿಯನ್ನು ಉದ್ಯಮದ ರೀತಿ ಪ್ರೋತ್ಸಾಹಿಸುವ ಕಾರ್ಯವಾಗಬೇಕಿದೆ. ರೈತ ಹುತಾತ್ಮ ದಿನದಂದು ರೈತರಿಗೆ ಸಿಗುವ ಎಲ್ಲ ಸೌಲಭ್ಯಗಳು ದೊರೆಯುವಂತಾದರೆ ಈ ಆಚರಣೆಗೆ ಹೆಚ್ಚು ಮಹತ್ವ ಬರುತ್ತದೆ ಎಂದರು.


ರೈತ ಮುಖಂಡರಾದ ನಿಂಗನಗೌಡ ಮಣಿಕಟ್ಟಿನ, ನೀಲಪ್ಪಗೌಡ ಮರಿಲಿಂಗನಗೌಡ್ರ, ಶಂಭು ತೇಲಿ, ಅಲ್ಲಿಸಾಬ ಅಗಸಿಮನಿ, ದಿವಾನಸಾಬ ಮಸೂತಿ, ನಿಂಗನಗೌಡ ಮರಿಲಿಂಗನಗೌಡ್ರ, ಅಣ್ಣಪ್ಪ ಹೊಸಮನಿ, ಶಿವಬಸಪ್ಪ ಹುಬ್ಬಳ್ಳಿ, ಲೋಹಿತ್ ಅಗಡಿ ಮುಂತಾದವರಿದ್ದರು.



ನರಗುಂದ ಪಟ್ಟಣದಲ್ಲಿ ಹುತಾತ್ಮ ರೈತರ ಸ್ಮಾರಕ ನಿರ್ಮಾಣಕ್ಕೆ ಉಚಿತ ಜಮೀನು ನೀಡಿರುವ ದೇಸಾಯಿಗೌಡ ಪಾಟೀಲ, ಸಲೀಮ ಮೇಗಲಮನಿ ಅವರನ್ನು ಸಚಿವ ಎಚ್.ಕೆ. ಪಾಟೀಲ, ಶಾಸಕ ಸಿ.ಸಿ. ಪಾಟೀಲ ಹಸಿರು ಶಾಲು ಹೊದಿಸಿ ಸನ್ಮಾನಿಸಿದರು.

# ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸಹಕರಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ 24/7 ಕಾರ್ಯನಿರ್ವಹಿಸುತ್ತಿದೆ. ಸಮಾಜದಲ್ಲಿ ಶಾಂತಿ ಕಾಪಾಡಲು, ಕಾನೂನು ಬಾಹಿರ ಚಟುವಟಿಕೆ ತಡೆಯಲು ಸಾರ್ವಜನಿಕರ ಸಹಕಾರವೂ ಅಗತ್ಯವಾಗಿದೆ ಎಂದು ಗದಗ ಜಿಲ್ಲಾ ನೂತನ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ ಹೇಳಿದರು.

ಅವರು ರವಿವಾರ ಪಟ್ಟಣದ ಪೊಲೀಸ್ ಠಾಣೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಆತ್ಮೀಯವಾಗಿ ಮಾತನಾಡಿ, ಜಿಲ್ಲೆಯ ಎಲ್ಲ ತಾಲೂಕಗಳಿಗೂ ಭೇಟಿ ನೀಡಿ ಅಲ್ಲಿನ ಸ್ಥಿತಿಗತಿಗಳನ್ನು ತಿಳಿದುಕೊಂಡು ಕಾನೂನು ಬಾಹಿರ ಚಟುವಟಿಕೆ ತಡೆಯುವ ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದು ಎಂದರು. ಲಕ್ಷ್ಮೇಶ್ವರ 50 ಸಾವಿರ ಜನಸಂಖ್ಯೆ ಹೊಂದಿರುವ ಬೆಳೆಯುತ್ತಿರುವ ಪಟ್ಟಣ, ತಾಲೂಕು ಕೇಂದ್ರವಾಗಿದ್ದು, ಹೆಚ್ಚಿನ ಸಿಬ್ಬಂದಿ ಅಗತ್ಯವಿದೆ. ಅದಕ್ಕಾಗಿ ಪೊಲೀಸ್ ಠಾಣೆ ಮೇಲ್ದರ್ಜೆಗೇರಿಸಬೇಕಿದೆ. ಇದು ಸರ್ಕಾರದ ಹಂತದಲ್ಲಿ ಆಗಬೇಕಾಗಿದ್ದು, ಆದ್ಯತಾನುಸಾರ ಸಿಬ್ಬಂದಿಗಳನ್ನು ಒದಗಿಸುವ ಪ್ರಯತ್ನ ಮಾಡಲಾಗುವುದು. ಪಟ್ಟಣದಲ್ಲಿ ರಸ್ತೆ ಸುರಕ್ಷತೆ, ವಾಹನ ದಟ್ಟಣೆ ನಿಯಂತ್ರಣಕ್ಕೆ ಈಗಾಗಲೇ ಇಲ್ಲಿನ ಅಧಿಕಾರಿಗಳು ಕ್ರಮ ತೆಗೆದುಕೊಳ್ಳುತ್ತಿದ್ದಾರೆ. ಮುಖ್ಯವಾಗಿ ಸಾರ್ವಜನಿಕರ ಸಹಕಾರ ಅವಶ್ಯವಾಗಿದೆ ಎಂದು ಹೇಳಿದರು.

ಈ ವೇಳೆ ಡಿವೈಎಸ್‌ಪಿ ಮುರ್ತುಜಾ ಖಾದ್ರಿ, ಪಿಎಸ್‌ಐ ನಾಗರಾಜ ಗಡಾದ, ಕ್ರೈಂ ವಿಭಾಗದ ಪಿಎಸ್‌ಐ ಟಿ.ಕೆ. ರಾಠೋಡ ಮತ್ತು ಸಿಬ್ಬಂದಿಗಳು ಇದ್ದರು.

# ಮಲಪ್ರಭಾ ನೀರು ಹರಿಸಲು ಸೂಚನೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಲಪ್ರಭಾ ಯೋಜನಾ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರೂ ಆಗಿರುವ ಸಚಿವೆ ಲಕ್ಷ್ಮೀ ಆರ್.ಹೆಬ್ಬಾಳಕರ್ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಮಲಪ್ರಭಾ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ವಿವರವಾಗಿ ಚರ್ಚಿಸಲಾಗಿ ದಿನಾಂಕ:18/07/2025ರ ಸಾಯಂಕಾಲ 6 ಗಂಟೆಯಿಂದ ಕಾಲುವೆಗಳ ಮೂಲಕ ಒಟ್ಟು 4.50 ಟಿ.ಎಂ.ಸಿ. ನೀರನ್ನು 15 ದಿನಗಳವರೆಗೆ ಕಾಲುವೆಗಳ ಕೊನೆಯ ಭಾಗದವರೆಗೆ ನೀರಾವರಿಗಾಗಿ ನೀರನ್ನು ಹರಿಸಲು ಹಾಗೂ ಜುಲೈ 2026 ಮಾಹೆಯ ಅಂತ್ಯದವರೆಗೆ ಕುಡಿಯು ಉದ್ದೇಶಕ್ಕಾಗಿ 20.00 ಟಿ.ಎಂ.ಸಿ. ನೀರನ್ನು ಕಾಯ್ದಿರಿಸಲು ನಿರ್ಣಯ ಕೈಗೊಳ್ಳಲಾಗಿದೆ. ಅದರಂತೆ, ದಿನಾಂಕ:18/07/2025ರ ಸಾಯಂಕಾಲ 6 ಗಂಟೆಯಿಂದ ಮಲಪ್ರಭಾ ಬಲದಂಡೆ ಕಾಲುವೆ, ನರಗುಂದ ಶಾಖಾ ಕಾಲುವೆ ಮುಖಾಂತರ ನೀರು ಹರಿಸಲಾಗಿದೆ. ಈಗಾಗಲೇ ಬೆಳೆದ ಬೆಳೆಗಳಿಗೆ ಸದರಿ ನೀರನ್ನು ಸದುಪಯೋಗ ಮಾಡಿಕೊಳ್ಳಲು ರೈತರಿಗೆ ಕೋರಲಾಗಿದೆ. ಸದರಿ ಸಮಯದಲ್ಲಿ ಸಾರ್ವಜನಿಕರು ಈಜಾಡಲು, ಬಟ್ಟೆ ತೊಳೆಯಲು, ದನ-ಕರುಗಳ ಮೈ ತೊಳೆಯಲು ಕಾಲುವೆಗಳಿಗೆ ಇಳಿಯದಂತೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

# ಕೇರಳ ಮಾಜಿ ಸಿಎಂ ಅಚ್ಯುತಾನಂದನ್ ನಿಧನ!

■ವಿಜಯಸಾಕ್ಷಿ ಸುದ್ದಿ, ತಿರುವನಂತಪುರಂ

ವಯೋಸಹಜ ಅನಾರೋಗ್ಯದಿಂದ ಕೇರಳ ಮಾಜಿ ಸಿಎಂ ವಿ.ಎಸ್ ಅಚ್ಯುತಾನಂದನ್ ಸೋಮವಾರ (101) ನಿಧನ ಹೊಂದಿದ್ದಾರೆ.

ಶತಾಯುಷಿ ಆಗಿರುವ ಅಚ್ಯುತಾನಂದನ್, ತಿರುವನಂತಪುರದ ಖಾಸಗಿ ಆಸ್ಪತ್ರೆಯಲ್ಲಿ ವಿಧಿವಶರಾಗಿದ್ದಾರೆ. ದೀರ್ಘಕಾಲದ ಅನಾರೋಗ್ಯದಿಂದಾಗಿ, ಇತ್ತೀಚೆಗೆ ಅವರು ಹಾಸಿಗೆ ಹಿಡಿದಿದ್ದರು. ತಿರುವನಂತಪುರಂನ ಪಟ್ಟಂನಲ್ಲಿರುವ ಎಸ್‌ಯುಟಿ ಆಸ್ಪತ್ರೆಯಲ್ಲಿ 1 ತಿಂಗಳಿಗೂ ಹೆಚ್ಚು ಕಾಲ ಚಿಕಿತ್ಸೆ ಪಡೆಯುತ್ತಿದ್ದ ಅವರು ಸೋಮವಾರ ಮಧ್ಯಾಹ್ನ 3.30ಕ್ಕೆ ನಿಧನರಾದರು.


## ದಾಖಲೆಗಳು ಕಳೆದಿವೆ

**ನಾನು ಸುಭಾಷ್ ಭೀಮಶಪ್ಪ, ವಿಳಾಸ: ಸಿಂಧನೂರು, ತಾ.: ಸಿಂಧನೂರು, ಜಿ.: ರಾಯಚೂರು, ಸಾರ್ವಜನಿಕರಿಗೆ ತಿಳಿಸಬೇಕೆಂದಿದ್ದೇನೆ: ಆರ್.ಎಸ್. ನಂ.46/8, ಪ್ಲಾಟ್ ನಂ. 52, ಪಂಚಾಯತ್ ನಂ.7974 ಮತ್ತು ಪ್ಲಾಟ್ ನಂ.53, ಪಂಚಾಯತ್ ನಂ. 7975, ಸ್ಥಳ : ರೋಣ, ತಾ.: ರೋಣ, ಜಿಲ್ಲೆ: ಗದಗ, ಕರ್ನಾಟಕ ಈ ಮುಕ್ತ ಸೈಟ್‌ಗಳ ಮೂಲ ಖರೀದಿ ದಾಖಲೆಗಳು (Purchase Deeds) ದಿನಾಂಕ 02/06/2025 ರಂದು ಸಂಜೆ 6:37 ಕ್ಕೆ ರೋಣ ಬಸ್ ನಿಲ್ದಾಣದಲ್ಲಿ ಅಜಾಗರೂಕತೆಯಿಂದ ಕಳುವಾಗಿವೆ. ಯಾರಾದರೂ ಈ ದಾಖಲೆಗಳನ್ನು ಕಂಡು ಹಿಡಿದಿದ್ದರೆ ದಯಮಾಡಿ ಕೆಳಗಿನ ವಿಳಾಸಕ್ಕೆ ಅಥವಾ ರೋಣ ಪೊಲೀಸ್ ಠಾಣೆಗೆ ಒಪ್ಪಿಸಿ...**



ಕರ್ನಾಟಕ ಸರಕಾರ

## ಗ್ರಾಮ ಪಂಚಾಯತ ಕಾರ್ಯಾಲಯ, ಕಳಸಾಪೂರ

ತಾಲೂಕ : ಗದಗ ಜಿಲ್ಲಾ : ಗದಗ

e-mail : kalasapur.gad.gdg@gmail.com

ನಂ:ಗ್ರಾ.ಪಂ./ಕಳಸಾಪೂರ/ಟೆಂಡರ/2025-26/20 ದಿನಾಂಕ : 21-7-2025

### ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ (ದ್ವಿ-ಲಕೋಟಿ)

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತಿಗೆದಾರ / ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 01 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2025-26ನೇ ಸಾಲಿನ MGNREGA ಯೋಜನೆಯಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ / ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ್ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತದೆ.

| ಕ್ರ.ಸಂ. | ಇಂಡೆಂಟ್ ನಂಬರ | ಟೆಂಡರಿಗಿಟ್ಟ ಮೊತ್ತ |
|---|---|---|
| 1 | RDPR/2025-26/IND10449 | ರೂ. 5,18,767.76 |

**ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ :** ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಂತೆ, ಇ.ಎಂ.ಡಿ. ಸಂಬಂಧಪಟ್ಟ ವರ್ಕ್ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರ್‌ಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ: 22-07-2025 ರಿಂದ 30-07-2025 ರಂದು 16.00 ಗಂಟೆಯವರೆಗೆ. ತಾಂತ್ರಿಕ ಬಿಡ್ ಟೆಂಡರ ತೆರೆಯುವ ದಿನಾಂಕ: 01-08-2025 ರಂದು 16.30 ಗಂಟೆಗೆ ಆರ್ಥಿಕ ಬಿಡ್ ದಿ: 02-08-2025 ರಂದು 17.00 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ/-

**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು,**

ಗ್ರಾಮ ಪಂಚಾಯತ ಕಳಸಾಪೂರ ತಾಲೂಕ : ಗದಗ, ಜಿಲ್ಲಾ : ಗದಗ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka